ಸಂಪುಟ: 06 ಸಂಚಿಕೆ: 182 ಪುಟಗಳು: 08 ಭಾನುವಾರ 13 ಸೆಪ್ಟೆಂಬರ್ 2026 www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಅನೇಕ ಸಾಧನೆಗಳು ಪ್ರಾರಂಭವಾಗುತ್ತವೆ. ಯಶಸ್ಸಿನ ಮೂಲ ಪಠ್ಯವೇ ಸೋಲು. ಪಾಠವನ್ನು ಅರಿತು ಗೆಲ್ಲೋಣ!

## ಪಿಡಬ್ಲ್ಯುಡಿ ಇಲಾಖೆಯಲ್ಲಿ ಲಂಚ ಪಡೆದು ವಿದೇಶಿ ಹೂಡಿಕೆಗೆ ದಾಖಲೆ ಏನಿದೆ: ಪ್ರಿಯಾಂಕ್ ಖರ್ಗೆ

• ಉದಯವಾಹಿನಿ, ಬೆಂಗಳೂರು

ಗಾಳಿ ಸುದ್ದಿಗೆ ನಾನು ಉತ್ತರ ಕೊಡಲು ಆಗಲ್ಲ. ಇಡಿ ಅವರು ಹೇಳಲಿ, ಗುತ್ತಿಗೆಯಲ್ಲಿ ಲಂಚ ಪಡೆದಿದ್ದಾರೆ, ಹಣವನ್ನ ಹೂಡಿಕೆ ಮಾಡಿದ್ದಾರೆ ಅಂತ ದಾಖಲೆ ಕೊಡಲಿ ಎಂದು ಸಚಿವ ಪ್ರಿಯಾಂಕ್ ಖರ್ಗೆ ಕಿಡಿಕಾರಿದ್ದಾರೆ. ಪಿಡಬ್ಲ್ಯುಡಿ ಇಲಾಖೆಯಲ್ಲಿ ಗುತ್ತಿಗೆ ನೀಡಲು ಲಂಚ ಪಡೆದು ಹೂಡಿಕೆ ಮಾಡಲಾಗಿದೆ ಎಂಬ ಇಡಿ ಆರೋಪಕ್ಕೆ ಪ್ರತಿಕ್ರಿಯಿಸಿದ ಅವರು, ಹಿಂದೆ ಇಂತಹ ನೂರು ಪ್ರೆಸ್ ನೋಟ್ ಬಿಡುಗಡೆ ಮಾಡಿದ್ದಾರೆ ಅಲ್ವಾ. ಕನ್ವಿಕ್ಷನ್ ರೇಟ್ ಬಗ್ಗೆ ನಾನು ಕೇಳುತ್ತಿರುವುದು. ರಾಜಕೀಯ ಪ್ರೇರಿತ ದಾಳಿ. ಇದೇ ಯತ್ನಾಳ್ ಅವರು ವಿಜಯೇಂದ್ರ ಬಗ್ಗೆ ಆರೋಪ ಮಾಡಿಲ್ವ? ಇಡಿ, ಐಟಿ ದಾಳಿ ಆಗಿದಿಯಾ? ಪಾಸ್‌ಪೋರ್ಟ್ ತೆಗೆದು ನೋಡಿ ಯರ? ಯಾರು ಎಲ್ಲಿಗೆ ಹೋಗಿದ್ದಾರೆ ಅಂತ. ಪಾಸ್ ಪೋರ್ಟ್ ನಾವು ಕೊಡುತ್ತೇವೆ, ಬಿಜೆಪಿಯವರು ಕೊಡುತ್ತಾರಾ? ದುಬೈ, ಮಾರಿಷಸ್‌ಗೆ ಎಷ್ಟು ಸಲ ಹೋಗಿ ಬಂದಿದ್ದಾರೆ ಅಂತ ಕೊಡಲಿ .ಬಿಜೆಪಿ ಎಂಎಲ್‌ಎಗಳು, ಮಾಜಿ ಸಚಿವರು ಎಲ್ಲಾ ಪಾಸ್‌ಪೋರ್ಟ್ ಕೊಡ್ಲಿ, ಎಲ್ಲಾ ತನಿಖೆ ಆಗಲಿ, ನಾವು ಕೊಡುತ್ತೇವೆ ಎಂದರು. ಕಾನೂನು ರೀತಿ ಹೂಡಿಕೆ ಮಾಡಿದ್ರೆ ಅಕ್ರಮ ಅಲ್ಲ. ಯಾವ ಗುತ್ತಿಗೆಯಲ್ಲಿ ಎಷ್ಟು ಲಂಚ ತೆಗೆದುಕೊಂಡಿದ್ದಾರೆ ನ್ಯಾಯಾಲಯದಲ್ಲಿ ಏನು ಆಯ್ತು? ಜೆಪಿ ಅವ್ರು ಕೇಂದ್ರ ಕ್ಷಮೆ ಕೇಳಿದ್ರಾ? ಮಾನಸಿಕವಾಗಿ ಹಿಂಸೆ ಕೊಟ್ರು ಅಲ್ವ? ಸಿಎಂ ಮತ್ತು ಅವರ ಕುಟುಂಬದವರಿಗೆ ಇಷ್ಟು ಚಾರಿತ್ರ? ಯ ಹರಣ ಮಾಡಿದ್ದಕ್ಕೆ ಕ್ಷಮೆ ಕೇಳಿದ್ರ? ಬಿಜೆಪಿಗೆ ಹೋದ ತಕ್ಷಣವೇ ಎಲ್ಲಾ ಶುದ್ಧ ಆಗುತ್ತೆ.

## ಅಕ್ಟೋಬರ್ ಅಂತ್ಯಕ್ಕೆ 'ಎತ್ತಿನಹೊಳೆ' ಟ್ರಯಲ್ ರನ್‌ಗೆ ಮುಹೂರ್ತ

• ಉದಯವಾಹಿನಿ, ಬೆಂಗಳೂರು

ನೀರಿಗಾಗಿ ತಪಸ್ಸು ಮಾಡುತ್ತಿದ್ದ ಬಯಲು ಸೀಮೆಯ ಜನರ ಬಹುನಿರೀಕ್ಷಿತ 'ಎತ್ತಿನಹೊಳೆ ಯೋಜನೆಯ' ಪ್ರಮುಖ ಕಾಮಗಾರಿ ಮುಕ್ತಾಯದ ಹಂತ ತಲುಪಿದ್ದು, ಶೀಘ್ರದಲ್ಲೇ ನೀರು ಹರಿಯುವ ಸುದಿನ ಸನ್ನಿಹಿತವಾಗಿದೆ. ಮುಂದಿನ ಅಕ್ಟೋಬರ್ ತಿಂಗಳ ಅಂತ್ಯಕ್ಕೆ ಯೋಜನೆಯ ಪ್ರಮುಖ ನಾಲೆಗಳಲ್ಲಿ ನೀರು ಹರಿಸಿ ಪರೀಕ್ಷಾರ್ಥ ಸಂಚಾರ ನಡೆಸಲು ಜಲಸಂಪನ್ಮೂಲ ಇಲಾಖೆಯ ಅಧಿಕಾರಿಗಳು ಹಾಗೂ ಇಂಜಿನಿಯರ್‌ಗಳು ಭರಪೂರ ಸಿದ್ಧತೆ ಕೈಗೊಂಡಿದ್ದಾರೆ. ಕೋಲಾರ, ಚಿಕ್ಕಬಳ್ಳಾಪುರ, ತುಮಕೂರು ಸೇರಿದಂತೆ ಒಣಭೂಮಿ ಜಿಲ್ಲೆಗಳ ದಾಹ ತೀರಿಸಲು ಹಮ್ಮಿಕೊಳ್ಳಲಾಗಿದ್ದ ಈ ಬೃಹತ್ ಯೋಜನೆಯಲ್ಲಿ ಇದೀಗ ಮಹತ್ವದ ಮೈಲಿಗಲ್ಲು ಸಾಧಿಸಲಾಗಿದೆ. ಹಾಸನದಿಂದ ತುಮಕೂರು ಜಿಲ್ಲೆಯ ಗಡಿಯವರೆಗೆ ಸುಮಾರು 250 ಕಿಲೋಮೀಟರ್ ದೂರದ ಮುಖ್ಯ ನಾಲೆಯ ಕಾಮಗಾರಿಯನ್ನು ಯಶಸ್ವಿಯಾಗಿ ಪೂರ್ಣಗೊಳಿಸಲಾಗಿದೆ. ಇನ್ನು ಕೇವಲ ಒಂದು ತಿಂಗಳ ಅವಧಿಯಲ್ಲಿ ನಾಲೆಯಲ್ಲಿ ಹಂತ-ಹಂತವಾಗಿ ನೀರು ಹರಿಸಿ ಪೈಪ್‌ಲೈನ್ ಹಾಗೂ ನಾಲೆಯ ಸಾಮರ್ಥ್ಯವನ್ನು ಪರೀಕ್ಷಿಸಲಾಗುತ್ತದೆ. ಸಿಎಂ ಸಿದ್ದರಾಮಯ್ಯ ಅವರು ಈ ಯೋಜನೆಗೆ ತಾರಕ ಚಾಲನೆ ನೀಡಿದ್ದರು. 11 ವರ್ಷಗಳಿಂದ ನಿರಂತರವಾಗಿ ನಡೆಯುತ್ತಿದ್ದ ಕಾಮಗಾರಿ ಫಲಪ್ರದವಾಗುವ ಹಂತಕ್ಕೆ ತಲುಪಿದೆ. ಎತ್ತಿನಹೊಳೆ ಯೋಜನೆಯು ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಷ್ಟೇ ಅಲ್ಲದೆ, ಪ್ರಮುಖವಾಗಿ ಹಾಸನ, ತುಮಕೂರು, ಬೆಂಗಳೂರು ಗ್ರಾಮಾಂತರ, ಚಿಕ್ಕಬಳ್ಳಾಪುರ, ಕೋಲಾರ ಹಾಗೂ ರಾಮನಗರ ಜಿಲ್ಲೆಗಳ ಲಕ್ಷಾಂತರ ಸಾರ್ವಜನಿಕರು ಮತ್ತು ರೈತರ ಕುಡಿಯುವ ನೀರಿನ ಹಾಹಾಕಾರಕ್ಕೆ ಪ್ರಮುಖ ಆಸರೆಯಾಗಲಿದೆ.

## ಟ್ರಾಫಿಕ್ ಜಾಮ್, ಆಂಬುಲೆನ್ಸ್ ಸಿಲುಕಿ ಪರದಾಟ

• ಉದಯವಾಹಿನಿ, ಬೆಂಗಳೂರು

ಗಣೇಶ ಚತುರ್ಥಿ ರಜೆ ಹಾಗೂ ವಾರಾಂತ್ಯದ ಸಾಲು ಸಾಲು ರಜೆಗಳ ಹಿನ್ನೆಲೆಯಲ್ಲಿ ಬೆಂಗಳೂರು-ನೆಲಮಂಗಲ ರಾಷ್ಟ್ರೀಯ ಹೆದ್ದಾರಿ 48 ರಲ್ಲಿ ಭಾರಿ ವಾಹನ ದಟ್ಟಣೆ ಉಂಟಾಗಿದೆ.

ಊರಿಗೆ ಹೊರಟ ಜನರಿಂದಾಗಿ ಬೆಂಗಳೂರು-ನೆಲಮಂಗಲ ರಾಷ್ಟ್ರೀಯ ಹೆದ್ದಾರಿಯು ಸಂಪೂರ್ಣವಾಗಿ ದಟ್ಟಣೆಯಿಂದ ಕೂಡಿದ್ದು, ಪ್ರಯಾಣಿಕರು ತೀವ್ರ ತೊಂದರೆ ಎದುರಿಸುತ್ತಿದ್ದಾರೆ. ಮುಖ್ಯವಾಗಿ, ನೆಲಮಂಗಲದ ಕುಣಿಗಲ್ ಸರ್ಕಲ್ ಬಳಿ ಪರಿಸ್ಥಿತಿ ಗಂಭೀರವಾಗಿದೆ. ಇಲ್ಲಿ ವಾಹನಗಳು ನಾಲ್ಕೈದು ಕಿಲೋಮೀಟರ್‌ಗಳಷ್ಟು ದೂರ ನಿಧಾನವಾಗಿ ಚಲಿಸುತ್ತಿದ್ದು, ಕೆಲವೆಡೆ ಸಂಪೂರ್ಣವಾಗಿ ನಿಂತಿವೆ. ಟ್ರಾಫಿಕ್‌ನಲ್ಲಿ ಸಾಮಾನ್ಯ ವಾಹನಗಳಷ್ಟೇ ಅಲ್ಲದೆ, ರೋಗಿಗಳನ್ನು ಸಾಗಿಸುತ್ತಿದ್ದ ಆಂಬುಲೆನ್ಸ್ ವಾಹನಗಳು ಸಹ ಸಿಲುಕಿಕೊಂಡಿದ್ದು, ತುರ್ತು ಸೇವೆಗಳಿಗೂ ಅಡ್ಡಿಯಾಗಿದೆ.ಈ ವಾಹನ ದಟ್ಟಣೆಯು ರಜಾದಿನಗಳಲ್ಲಿ ಪ್ರವಾಸಕ್ಕೆ ಹೊರಟವರು, ಹಬ್ಬಕ್ಕೆ ಊರಿಗೆ ತೆರಳುವವರು ಹಾಗೂ ವಾರಾಂತ್ಯದ ಪ್ರಯಾಣಿಕರಿಗೆ ತಲೆನೋವಾಗಿ ಪರಿಣಮಿಸಿದೆ. ವಾಹನಗಳ ಸಾಲುಗಟ್ಟಿದ ದೃಶ್ಯಗಳು ಸಾಮಾನ್ಯವಾಗಿದ್ದು, ಟ್ರಾಫಿಕ್ ಪೊಲೀಸರು ಪರಿಸ್ಥಿತಿ ನಿಭಾಯಿಸಲು ಹರಸಾಹಸ ಪಡುತ್ತಿದ್ದಾರೆ.

## ಬಿಟಿಎಂ ಲೇಔಟ್ ವ್ಯಾಪ್ತಿಯ 3 ಮೆಟ್ರೋ ನಿಲ್ದಾಣಗಳಿಗೆ ಸ್ಥಳೀಯ ಹೆಸರುಗಳನ್ನೇ ಇಡಿ: ಬಿಎಂಆರ್‌ಸಿಎಲ್‌ಗೆ ರಾಮಲಿಂಗಾ ರೆಡ್ಡಿ ಪತ್ರ

• ಉದಯವಾಹಿನಿ, ಬೆಂಗಳೂರು

ಕಾಳೇನ ಅಗ್ರಹಾರದಿಂದ ನಾಗವಾರವರೆಗಿನ ಪಿಂಕ್ ಲೈನ್ ಮಾರ್ಗದಲ್ಲಿರುವ ಮೂರು ಮೆಟ್ರೋ ನಿಲ್ದಾಣಗಳ ಹೆಸರುಗಳನ್ನು ಬದಲಾಯಿಸುವಂತೆ ಬಿಟಿಎಂ ಲೇಔಟ್ ಶಾಸಕ ಹಾಗೂ ಅರಣ್ಯ ಸಚಿವ ರಾಮಲಿಂಗಾರೆಡ್ಡಿ ಬಿಎಂಆರ್‌ಸಿಎಲ್ ವ್ಯವಸ್ಥಾಪಕ ನಿರ್ದೇಶಕರಿಗೆ ಪತ್ರ ಬರೆದಿದ್ದಾರೆ. ಬಿಟಿಎಂ ಲೇಔಟ್ ವಿಧಾನಸಭಾ ಕ್ಷೇತ್ರ ವ್ಯಾಪ್ತಿಗೆ ಬರುವ ಈ ನಿಲ್ದಾಣಗಳಿಗೆ ಸ್ಥಳೀಯ ಪ್ರದೇಶದ ಹಾಗೂ ಜನಸಾಮಾನ್ಯರಿಗೆ ಪರಿಚಿತವಾಗಿರುವ ಹೆಸರುಗಳನ್ನೇ ಮರುನಾಮಕರಣ ಮಾಡಬೇಕೆಂದು ಅವರು ಕೋರಿದ್ದಾರೆ. ಮೆಟ್ರೋ ನಿಲ್ದಾಣಗಳ ಹೆಸರುಗಳನ್ನು ಆಯಾ ನಿಲ್ದಾಣಗಳು ಇರುವ ಸ್ಥಳೀಯ ಪ್ರದೇಶದ ಹೆಸರು, ಪರಿಗಣಿಸಿ ಸೂಕ್ತವಾಗಿ ಮರುನಾಮಕರಣ ಮಾಡುವ ಅಗತ್ಯವಿದೆ. ಪ್ರಸ್ತುತ ಕೆಲವು ಮೆಟ್ರೋ ನಿಲ್ದಾಣಗಳ ಹೆಸರು ನಿಲ್ದಾಣ ಇರುವ ನಿಖರ ಸ್ಥಳ ಅಥವಾ ಆ ಪ್ರದೇಶದ ಜನರಿಗೆ ಹೆಚ್ಚು ಪರಿಚಿತವಾಗಿರುವ ಸ್ಥಳೀಯ ಹೆಸರನ್ನು ಪ್ರತಿಬಿಂಬಿಸುವುದಿಲ್ಲ.

# ಶೃಂಗ ಭಾರತ ಉತ್ತುಂಗ




## ಬ್ರಿಕ್ಸ್ : ನಾಯಕರ ಸಮಾಗಮ

● ಬ್ರಿಕ್ಸ್ ದೆಹಲಿ ಘೋಷಣೆಗೆ ಒಮ್ಮತದ ಅಂಗೀಕಾರ ● ಪ್ರಧಾನಿ ನರೇಂದ್ರ ಮೋದಿ ಪ್ರಕಟಣೆ ● ಶೃಂಗಸಭೆಯಲ್ಲಿ ಪುಟಿನ್ ಜೊತೆ ಷಿ ಜಿನ್‌ಪಿಂಗ್ ಕೈ ಹಿಡಿದು ಮುಗುಳ್ನಕ್ಕ ಮೋದಿ! ● ಒಂದು ಫೋಟೋ ನೂರು ಮಾತು

**1** ಜಾಗತಿಕ ಉದ್ವಿಗ್ನತೆಯ ನಡುವೆ ದೆಹಲಿಯಲ್ಲಿ ಬ್ರಿಕ್ಸ್ ನಾಯಕರ ಮಹತ್ವದ ಭೇಟಿ

**2** ವೈರಲ್ ಆಯ್ತು ಮೋದಿ, ಪುಟಿನ್, ಜಿನ್‌ಪಿಂಗ್ ಫೋಟೋ!

**3** ರಷ್ಯಾ ಅಧ್ಯಕ್ಷ ಪುಟಿನ್‌ಗೆ ದ್ವಿಪಕ್ಷೀಯ ಸಭೆಯಲ್ಲಿ ಪ್ರಧಾನಿ ಮೋದಿ ಕಿವಿಮಾತು!



• ಉದಯವಾಹಿನಿ, ಬೆಂಗಳೂರು

ಭಾರತದ ಆತಿಥ್ಯದಲ್ಲಿ 18ನೇ ಬ್ರಿಕ್ಸ್ ಶೃಂಗಸಭೆ ಶನಿವಾರ ನವದೆಹಲಿಯ ಭಾರತ್ ಮಂಟಪದಲ್ಲಿ ಆರಂಭಗೊಂಡಿದ್ದು, ವಿಶ್ವದ ಪ್ರಮುಖ ಉದಯೋನ್ಮುಖ ಆರ್ಥಿಕತೆಗಳ ನಾಯಕರು ಒಂದೇ ವೇದಿಕೆಯಲ್ಲಿ ಸೇರಿದ್ದಾರೆ. ಎರಡು ದಿನಗಳ ಕಾಲ ನಡೆಯಲಿರುವ ಸಭೆಯಲ್ಲಿ ಜಾಗತಿಕ ರಾಜಕೀಯ ಮತ್ತು ಆರ್ಥಿಕ ಪರಿಸ್ಥಿತಿ, ವ್ಯಾಪಾರ, ಹೂಡಿಕೆ, ಇಂಧನ ಭದ್ರತೆ, ತಂತ್ರಜ್ಞಾನ, ಕೃತಕ ಬುದ್ಧಿಮತ್ತೆ ಹಾಗೂ ಬಹುಪಕ್ಷೀಯ ವ್ಯವಸ್ಥೆಯ ಸುಧಾರಣೆ ಸೇರಿದಂತೆ ಹಲವು ಮಹತ್ವದ ವಿಷಯಗಳು ಚರ್ಚೆಗೆ ಬಂದಿವೆ. ಇಂದಿನಿಂದ ಆರಂಭವಾಗಿರುವ ವಿಶ್ವದ ಗಮನ ಸೆಳೆದಿರುವ ಬ್ರಿಕ್ಸ್ ಶೃಂಗಸಭೆಯಲ್ಲಿ ಬ್ರಿಕ್ಸ್ ದೆಹಲಿ ಘೋಷಣೆಯನ್ನು ಸರ್ವಾನುಮತದಿಂದ ಅಂಗೀಕರಿಸಲಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಅವರು ಅಧಿಕೃತವಾಗಿ ಪ್ರಕಟಿಸಿದರು.

ರಾಜಧಾನಿಯಲ್ಲಿರುವ ಭಾರತ್ ಮಂಟಪದಲ್ಲಿ ಪ್ರಾರಂಭವಾಯಿತು. 2 ದಿನಗಳ ಈ ಕಾರ್ಯಕ್ರಮವು ಬ್ರೆಜಿಲ್, ಚೀನಾ, ಈಜಿಪ್ಟ್, ಇಥಿಯೋಪಿಯಾ, ಇಂಡೋನೇಷ್ಯಾ, ಭಾರತ, ಇರಾನ್, ರಷ್ಯಾ, ಸೌದಿ ಅರೇಬಿಯಾ, ದಕ್ಷಿಣ ಆಫ್ರಿಕಾ ಮತ್ತು ಯುಎಇ ಸೇರಿದಂತೆ 21 ಪ್ರಮುಖ ಉದಯೋನ್ಮುಖ ಮತ್ತು ಅಭಿವೃದ್ಧಿಶೀಲ ಆರ್ಥಿಕತೆ ಹೊಂದಿರುವ ರಾಷ್ಟ್ರಗಳು ಭಾಗವಹಿಸಿವೆ. ಶೃಂಗಸಭೆಯ ಉದ್ಘಾಟನಾ ಭಾಷಣದಲ್ಲಿ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ ಅವರು, ಜಾಗತಿಕ ವೇದಿಕೆಯಲ್ಲಿ ಬ್ರಿಕ್ಸ್ ಕೂಟವು ವಿಶಿಷ್ಟ ಗುರುತನ್ನು ಸ್ಥಾಪಿಸಿದೆ. ನಮ್ಮ ಒಕ್ಕೂಟವು ಯಾವುದೇ ದೇಶದ ವಿರುದ್ಧವಾಗಿ ರಚಿತವಾಗಿಲ್ಲ ಎಂದು ಸ್ಪಷ್ಟಪಡಿಸಿದರು. ಇದು ಅಮೆರಿಕ ಮತ್ತು ಇತರೆ ಪಾಶ್ಚಿಮಾತ್ಯ ರಾಷ್ಟ್ರಗಳಿಗೆ ರವಾನಿಸಲಾದ ಪರೋಕ್ಷ ಸಂದೇಶ ಎಂದೇ ವಿಶ್ಲೇಷಿಸಲಾಗುತ್ತಿದೆ.

**ಬ್ರಿಕ್ಸ್ ಒಕ್ಕೂಟದ ವಿಸ್ತರಣೆ:** ಆರಂಭದಲ್ಲಿ ಬ್ರೆಜಿಲ್, ರಷ್ಯಾ, ಭಾರತ, ಚೀನಾ ಮತ್ತು ದಕ್ಷಿಣ ಆಫ್ರಿಕಾವನ್ನು ಒಳಗೊಂಡಿದ್ದ ಬ್ರಿಕ್ಸ್ ಒಕ್ಕೂಟವು, 2024 ರಲ್ಲಿ ಈಜಿಪ್ಟ್, ಇಥಿಯೋಪಿಯಾ, ಇರಾನ್, ಯುನೈಟೆಡ್ ಅರಬ್ ಎಮಿರೇಟ್ಸ್ ಮತ್ತು ಸೌದಿ ಅರೇಬಿಯಾವನ್ನು ಸೇರಿಸಿಕೊಳ್ಳುವ ಮೂಲಕ ವಿಸ್ತರಣೆಗೊಂಡಿತು. ಬಳಿಕ, 2025 ರಲ್ಲಿ ಇಂಡೋನೇಷ್ಯಾ ಈ ಕೂಟವನ್ನು ಸೇರಿತು. ಕಳೆದ ವರ್ಷ ಬೆಲಾರಸ್, ಬೊಲಿವಿಯಾ, ಕಝಾಕಿಸ್ತಾನ್, ಕ್ಯೂಬಾ, ಮಲೇಷ್ಯಾ, ನೈಜೀರಿಯಾ, ಥೈಲ್ಯಾಂಡ್, ಉಗಾಂಡಾ, ಉಜ್ಬೇಕಿಸ್ತಾನ್ ಮತ್ತು ವಿಯೆಟ್ನಾಂ ಬ್ರಿಕ್ಸ್‌ನ ಪಾಲುದಾರ ರಾಷ್ಟ್ರಗಳಾಗಿ ಗುರುತಿಸಿಕೊಂಡಿವೆ.

**ಇರಾನ್ ಅಧ್ಯಕ್ಷರೊಂದಿಗೂ ಮೋದಿ ಫೋಟೋ:** ಇದಕ್ಕೂ ಒಂದು ದಿನದ ಮೊದಲು, ಇರಾನ್ ಅಧ್ಯಕ್ಷ ಮಸೂದ್ ಪೆಝೆಶ್ಕಿಯನ್ ಅವರ ಕೈ ಹಿಡಿದು ನಿಂತಿದ್ದ ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರ ಫೋಟೋ ಕೂಡ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿತ್ತು. ಇರಾನ್ ಭಾಗಿಯಾಗಿರುವ ಪ್ರಸ್ತುತ ಯುದ್ಧ ಪರಿಸ್ಥಿತಿಯಿಂದಾಗಿ ಜಾಗತಿಕ ಇಂಧನ ಪೂರೈಕೆ ಮತ್ತು ಸಾಗರ ವ್ಯಾಪಾರಕ್ಕೆ ಧಕ್ಕೆಯಾಗಿರುವ ಬೆನ್ನಲ್ಲೇ ಮೋದಿಯವರ ಈ ನಡೆ ಜಾಗತಿಕ ರಾಜಕೀಯ ವಲಯದಲ್ಲಿ ತೀವ್ರ ಕುತೂಹಲ ಮೂಡಿಸಿತ್ತು.




## ಡಬ್ಲ್ಯುಟಿಒ ಸುಧಾರಣೆಗೆ ಬೆಂಬಲ

ಮುಕ್ತ, ಸಮಾನ, ಪಾರದರ್ಶಕ ಮತ್ತು ನಿಯಮಾಧಾರಿತ ಬಹುಪಕ್ಷೀಯ ವ್ಯಾಪಾರ ವ್ಯವಸ್ಥೆಯನ್ನು ಬ್ರಿಕ್ಸ್ ಬೆಂಬಲಿಸಿದೆ. ವಿಶ್ವ ವ್ಯಾಪಾರ ಸಂಸ್ಥೆಯ ವಿವಾದ ಇತ್ಯರ್ಥ ಕಾರ್ಯವಿಧಾನವನ್ನು ತಕ್ಷಣವೇ ಮರುಸ್ಥಾಪಿಸಬೇಕು. ಬಾಕಿ ಇರುವ ಮೇಲ್ಮನವಿ ಮಂಡಳಿಯ ಸದಸ್ಯರ ನೇಮಕಾತಿಯನ್ನು ವಿಳಂಬವಿಲ್ಲದೆ ಮಾಡಬೇಕು ಎಂದು ಬ್ರಿಕ್ಸ್ ಬಲವಾಗಿ ಪ್ರತಿಪಾದಿಸಿದೆ.

## 11 ರಾಷ್ಟ್ರಗಳ ಒಕ್ಕೂಟ

ಬ್ರಿಕ್ಸ್‌ನ ಮೂಲ ಸದಸ್ಯರಾದ ಭಾರತ, ಬ್ರೆಜಿಲ್, ರಷ್ಯಾ, ಚೀನಾ ಮತ್ತು ದಕ್ಷಿಣ ಆಫ್ರಿಕಾ ಜೊತೆಗೆ ಈಜಿಪ್ಟ್, ಇಥಿಯೋಪಿಯಾ, ಇರಾನ್, ಇಂಡೋನೇಷ್ಯಾ, ಸೌದಿ ಅರೇಬಿಯಾ ಮತ್ತು ಯುಎಇ ಸೇರಿ ಒಟ್ಟು 11 ರಾಷ್ಟ್ರಗಳು ಈಗ ಸಂಘಟನೆಯ ಸದಸ್ಯರಾಗಿವೆ.

ವಿಸ್ತರಣೆಯ ಬಳಿಕ ಬ್ರಿಕ್ಸ್ ವೇದಿಕೆಯ ಆರ್ಥಿಕ ಮತ್ತು ರಾಜತಾಂತ್ರಿಕ ವ್ಯಾಪ್ತಿ ಹೆಚ್ಚಾಗಿದೆ. ಅಭಿವೃದ್ಧಿಶೀಲ ಹಾಗೂ ಉದಯೋನ್ಮುಖ ರಾಷ್ಟ್ರಗಳ ನಡುವೆ ಸಹಕಾರ ಹೆಚ್ಚಿಸುವುದು ಈ ವೇದಿಕೆಯ ಪ್ರಮುಖ ಉದ್ದೇಶವಾಗಿದೆ. ಶೃಂಗಸಭೆಗೂ ಮುನ್ನ ಪ್ರಧಾನಿ ನರೇಂದ್ರ ಮೋದಿ ಮತ್ತು ರಷ್ಯಾ ಅಧ್ಯಕ್ಷ ವ್ಲಾದಿಮಿರ್ ಪುಟಿನ್ ದ್ವಿಪಕ್ಷೀಯ ಮಾತುಕತೆ ನಡೆಸಿದರು. ಭಾರತ -ರಷ್ಯಾ ಸಂಬಂಧಗಳ ಜೊತೆಗೆ ರಕ್ಷಣೆ, ಇಂಧನ, ಅಣುಶಕ್ತಿ, ವ್ಯಾಪಾರ, ಹೂಡಿಕೆ, ಬಾಹ್ಯಾಕಾಶ ಮತ್ತು ಪ್ರಮುಖ ಖನಿಜಗಳ ಕ್ಷೇತ್ರಗಳಲ್ಲಿ ಸಹಕಾರ ಹೆಚ್ಚಿಸುವ ಕುರಿತು ಚರ್ಚೆ ನಡೆಯಿತು.ಉಭಯ ದೇಶಗಳ ನಡುವಿನ ವ್ಯಾಪಾರವನ್ನು ಮತ್ತಷ್ಟು ಹೆಚ್ಚಿಸುವ ಮಾರ್ಗಗಳ ಬಗ್ಗೆಯೂ ಮಾತುಕತೆ ನಡೆದಿದೆ.

## ಬ್ರಿಕ್ಸ್ ಸಭೆಗೂ ಮುನ್ನ ಮಹತ್ವದ ನಿರ್ಧಾರ ಘೋಷಿಸಿದ ಚೀನಾ



ಭಾರತದ ಆತಿಥ್ಯದಲ್ಲಿ ದೆಹಲಿಯಲ್ಲಿ 18ನೇ ಬ್ರಿಕ್ಸ್ ಶೃಂಗಸಭೆ ಆರಂಭವಾಗಿದ್ದು, ಜಾಗತಿಕ ರಾಜಕೀಯ, ಆರ್ಥಿಕತೆ, ವ್ಯಾಪಾರ, ಹೂಡಿಕೆ, ತಂತ್ರಜ್ಞಾನ, ಇಂಧನ ಭದ್ರತೆ ಸೇರಿದಂತೆ ಹಲವು ಪ್ರಮುಖ ವಿಚಾರಗಳು ಚರ್ಚೆಯ ಕೇಂದ್ರವಾಗಿವೆ. ಹಲವು ಜಾಗತಿಕ ನಾಯಕರ ಜೊತೆಗೆ ಪ್ರಧಾನಿ ಮೋದಿ ದ್ವಿಪಕ್ಷೀಯ ಮಾತುಕತೆ ನಡೆಸುತ್ತಿದ್ದು ಇನ್ನೇನು ಕೆಲವೇ ಹೊತ್ತಿನಲ್ಲಿ ಚೀನಾ ಅಧ್ಯಕ್ಷ ಕ್ಸಿ ಜಿಂಗ್‌ಪಿಂಗ್ ಜೊತೆಗೆ ಮಾತುಕತೆ ನಡೆಸಲಿದ್ದಾರೆ. ಹಲಿಯಲ್ಲಿ ಬ್ರಿಕ್ಸ್ ಶೃಂಗಸಭೆಗೆ ಅದ್ದೂರಿ ಚಾಲನೆ ಸಿಕ್ಕಿದೆ. ಶೃಂಗಸಭೆಯ ಪ್ರಮುಖ ಆಕರ್ಷಣೆಯಾಗಿರುವುದು ಪ್ರಧಾನಿ ನರೇಂದ್ರ ಮೋದಿ ಮತ್ತು ಚೀನಾ ಅಧ್ಯಕ್ಷ ಕ್ಸಿ ಜಿನ್‌ಪಿಂಗ್ ಅವರ ದ್ವಿಪಕ್ಷೀಯ ಭೇಟಿ. ಜಿನ್‌ಪಿಂಗ್ 7 ವರ್ಷಗಳ ಬಳಿಕ ಭಾರತಕ್ಕೆ ಭೇಟಿ ನೀಡಿದ್ದು, ಉಭಯ ನಾಯಕರ ಮಾತುಕತೆಯ ಮೇಲೆ ಜಾಗತಿಕ ಗಮನ ನೆಟ್ಟಿದೆ. ನಡುವೆ ಬ್ರಿಕ್ಸ್ ಸಭೆಯಲ್ಲಿ ಭಾಗಿಯಾಗುವ ಮುನ್ನ ಚೀಜಾ ಮಹತ್ವದ ನಿರ್ಧಾರ ಘೋಷಿಸಿದೆ. 6 ವರ್ಷಗಳ ನಂತರ ಭಾರತಕ್ಕೆ ಏರ್ಲೈನ್ಸ್ ಸೇವೆಗಳ ಪುನಾರಂಭ ಘೋಷಣೆ ಮಾಡಲಾಗಿದೆ. ಚೀನಾ ಸದರ್ನ್ ಏರ್ಲೈನ್ಸ್ ಸೇವೆ ಪುನಾರಂಭವಾಗಿದ್ದು ಗುವಾಂಗ್ಝೌ ನವದೆಹಲಿ ಸೇವೆ ಪುನಾರಂಭವಾಗಲಿದೆ. ಬ್ರಿಕ್ಸ್ ಶೃಂಗಸಭೆಗೆ ಆಗಮಿಸಿದ ಜಾಗತಿಕ ನಾಯಕರ ಜೊತೆಗೆ ಪ್ರಧಾನಿ ಮೋದಿ ದ್ವಿಪಕ್ಷೀಯ ಮಾತುಕತೆ ನಡೆಸುತ್ತಿದ್ದಾರೆ. ಇಂದು ಬೆಳಗ್ಗೆ ಇಥಿಯೋಪಿಯಾ ಪ್ರಧಾನಿ ಅಬಿಯ್ ಅಹ್ಮದ್, ಮಲೇಷ್ಯಾ ಪ್ರಧಾನಿ ಅನ್ವರ್ ಇಬ್ರಾಹಿಂ, ಅಬುಧಾಬಿಯ ಕ್ರೌನ್ ಪ್ರಿನ್ಸ್ ಶೇಖ್ ಖಾಲಿದ್ ಬಿನ್ ಮೊಹಮ್ಮದ್ ಬಿನ್ ಜಾಯೆದ್ ಅಲ್ ನಹ್ಯಾನ್, ವಿಯೆಟ್ನಾಂ ಪ್ರಧಾನಿ ಲೆ ಮಿನ್ ಹಂಗ್ ಜೊತೆಗೆ ಸರಣಿ ಸಭೆ ನಡೆಸಿದರು.

## ಎಲ್ಲರನ್ನೂ ಒಟ್ಟಿಗೆ ಕರೆದೊಯ್ಯುವುದು ನಮ್ಮ ಉದ್ದೇಶ

ಬ್ರಿಕ್ಸ್ ಶೃಂಗಸಭೆಗೆ ಎಲ್ಲರನ್ನೂ ಹೃತ್ಪೂರ್ವಕವಾಗಿ ಸ್ವಾಗತಿಸುತ್ತೇನೆ. ನಿಮ್ಮ ತಂಡಗಳನ್ನು ಸ್ವಾಗತಿಸುವ ಅವಕಾಶ ನಮಗೆ ಸಿಕ್ಕಿತು. ಭಾರತದ ಬ್ರಿಕ್ಸ್ ಅಧ್ಯಕ್ಷತೆಯನ್ನು ಯಶಸ್ವಿಗೊಳಿಸುವಲ್ಲಿ ನಿಮ್ಮ ಸಕ್ರಿಯ ಕೊಡುಗೆ ಮತ್ತು ಬೆಂಬಲಕ್ಕಾಗಿ ನಿಮ್ಮೆಲ್ಲರಿಗೂ ನನ್ನ ಹೃತ್ಪೂರ್ವಕ ಕೃತಜ್ಞತೆಯನ್ನು ವ್ಯಕ್ತಪಡಿಸುತ್ತೇನೆ ಎಂದು ಹೇಳಿದರು.

ಮುಂದುವರಿದು, ಸ್ನೇಹಿತರೇ, ಬ್ರಿಕ್ಸ್ ಅನ್ನು ಬಲಪಡಿಸುವುದರ ಜೊತೆಗೆ, ನಾವು ಜಾಗತಿಕ ಸುಧಾರಣೆಯ ಹಾದಿಯನ್ನು ಸಹ ರೂಪಿಸಬೇಕು. ಜಾಗತಿಕ ಆಡಳಿತದ ಪ್ರಸ್ತುತ ರಚನೆಯು ಪಿರಮಿಡ್ ಅನ್ನು ಹೋಲುತ್ತದೆ. ಮುಂದಿನ 20 ವರ್ಷಗಳ ಕಾಲ ನಾವು ಹೊಸ ಮತ್ತು ಮಹತ್ವಾಕಾಂಕ್ಷೆಯ ಕಾರ್ಯಸೂಚಿಯಲ್ಲಿ ಕೆಲಸ ಮಾಡಬೇಕು. ನಾವು ನಮ್ಮದೇ ಆದ ಕಾರ್ಯ ವ್ಯವಸ್ಥೆಯೊಂದಿಗೆ ಪ್ರಾರಂಭಿಸಬೇಕು. ಬ್ರಿಕ್ಸ್ ಅಧ್ಯಕ್ಷತೆಯು ಪ್ರತಿ ವರ್ಷ ಬದಲಾಗುತ್ತದೆ, ಆದರೆ ಇದು ನಮ್ಮ ಸಾಂಸ್ಥಿಕ ಆವೇಗವನ್ನು ನಿಲ್ಲಿಸಬಾರದು. ನಾನು ಬ್ರಿಕ್ಸ್ ಸಮುದಾಯ ನಿರಂತರತೆ ಮತ್ತು ಅನುಷ್ಠಾನ ಕಾರ್ಯವಿಧಾನವನ್ನು ಪ್ರಸ್ತಾಪಿಸುತ್ತೇನೆ. ಇದರ ಅಡಿಯಲ್ಲಿ, ಎಲ್ಲಾ ಉಪಕ್ರಮಗಳು ಮತ್ತು ಫಲಿತಾಂಶಗಳನ್ನು ಟ್ರ್ಯಾಕಾ ಮೂಲಕ ಅನುಸರಿಸಬಹುದು. ನಾವು ಸುರಕ್ಷಿತ ಡಿಜಿಟಲ್ ಭಂಡಾರವನ್ನು ರಚಿಸಬಹುದು ಎಂದು ಹೇಳಿದರು.

## ಏಳು ವರ್ಷಗಳ ಬಳಿಕ ಭಾರತಕ್ಕೆ ಕ್ಸಿ

ಚೀನಾ ಅಧ್ಯಕ್ಷ ಕ್ಸಿ ಜಿನ್‌ಪಿಂಗ್ ನವದೆಹಲಿಗೆ ಆಗಮಿಸಿರುವುದು ಈ ಬಾರಿಯ ಶೃಂಗಸಭೆಯ ಮತ್ತೊಂದು ಪ್ರಮುಖ ಬೆಳವಣಿಗೆಯಾಗಿದೆ. ಸುಮಾರು ಏಳು ವರ್ಷಗಳ ಬಳಿಕ ಅವರ ಭಾರತ ಭೇಟಿ ನಡೆದಿದ್ದು, ಪ್ರಧಾನಿ ನರೇಂದ್ರ ಮೋದಿ ಮತ್ತು ಕ್ಸಿ ಜಿನ್‌ಪಿಂಗ್ ನಡುವೆ ದ್ವಿಪಕ್ಷೀಯ ಮಾತುಕತೆಯ ಮೇಲೂ ವಿಶೇಷ ಗಮನವಿದೆ. ಭಾರತ , ಚೀನಾ ಸಂಬಂಧ, ಗಡಿ ಪರಿಸ್ಥಿತಿ, ವ್ಯಾಪಾರ ಮತ್ತು ಬ್ರಿಕ್ಸ್ ವೇದಿಕೆಯಲ್ಲಿ ಎರಡೂ ರಾಷ್ಟ್ರಗಳ ಸಹಕಾರ ಸೇರಿದಂತೆ ಹಲವು ವಿಷಯಗಳು ಮಾತುಕತೆಯಲ್ಲಿ ಪ್ರಮುಖವಾಗುವ ನಿರೀಕ್ಷೆಯಿದೆ.

## ಎಐಗೆ ವಿಶೇಷ ಒತ್ತು

ಕೃತಕ ಬುದ್ಧಿಮತ್ತೆ ಮತ್ತು ಹೊಸ ತಂತ್ರಜ್ಞಾನ ಕ್ಷೇತ್ರದಲ್ಲಿನ ಸಹಕಾರಕ್ಕೂ ಭಾರತ ಈ ಬಾರಿ ಹೆಚ್ಚಿನ ಒತ್ತು ನೀಡಿದೆ. ತಂತ್ರಜ್ಞಾನವನ್ನು ಅಭಿವೃದ್ಧಿ, ಆರೋಗ್ಯ, ಕೃಷಿ, ಕೈಗಾರಿಕೆ ಮತ್ತು ಸಾರ್ವಜನಿಕ ಸೇವೆಗಳಲ್ಲಿ ಬಳಸುವ ಕುರಿತು ಚರ್ಚೆ ನಡೆಯುತ್ತಿದೆ.

ಶೃಂಗಸಭೆಯ ಅಂಗವಾಗಿ ಭಾರತ ಮಂಟಪದಲ್ಲಿ 'ಭಾರತ್ ಇನ್ನೋವೇಟ್ಸ್' ಪ್ರದರ್ಶನವನ್ನು ಆಯೋಜಿಸಲಾಗಿದ್ದು, ವಿವಿಧ ಭಾರತೀಯ ತಂತ್ರಜ್ಞಾನ ಮತ್ತು ಆವಿಷ್ಕಾರಗಳನ್ನು ವಿದೇಶಿ ಗಣ್ಯರಿಗೆ ಪರಿಚಯಿಸಲಾಗುತ್ತಿದೆ. ಮುಖ್ಯ ಶೃಂಗಸಭೆಗೆ ಮುನ್ನ ಬ್ರಿಕ್ಸ್ ಬಿಸಿನೆಸ್ ಫೋರಂ ಕೂಡ ನಡೆದಿದ್ದು, ಸದಸ್ಯ ರಾಷ್ಟ್ರಗಳ ಉದ್ಯಮಿಗಳು ಮತ್ತು ಹೂಡಿಕೆದಾರರು ವ್ಯಾಪಾರ, ಸರಬರಾಜು ಸರಪಳಿ, ಡಿಜಿಟಲ್ ಆರ್ಥಿಕತೆ, ಕೃಷಿ, ಉತ್ಪಾದನೆ ಮತ್ತು ಹೂಡಿಕೆ ಅವಕಾಶಗಳ ಕುರಿತು ಚರ್ಚಿಸಿದ್ದಾರೆ.

# ಬೆಂಗಳೂರು ಪೊಲೀಸರ ಭರ್ಜರಿ ಕಾರ್ಯಾಚರಣೆ : 150 ಬಾಲಕಾರ್ಮಿಕರ ರಕ್ಷಣೆ

• ಉದಯವಾಹಿನಿ, ಬೆಂಗಳೂರು

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್‌ರವರು ಇತ್ತೀಚೆಗೆ ಯಶವಂತಪುರದ ಎಪಿಎಂಸಿ ಮಾರುಕಟ್ಟೆಗೆ ದಿಢೀರ್ ಭೇಟಿ ನೀಡಿದ ಸಂದರ್ಭದಲ್ಲಿ ಬಾಲಕಾರ್ಮಿಕರನ್ನು ಗಮನಿಸಿ ಅಸಮಾಧಾನ ವ್ಯಕ್ತಪಡಿಸಿ ಕ್ರಮ ಕೈಗೊಳ್ಳುವಂತೆ ಸೂಚನೆ ನೀಡಿದ ಹಿನ್ನೆಲೆಯಲ್ಲಿ ಇಂದು ನಗರ ಪೊಲೀಸರು ನಗರದಾದ್ಯಂತ ಕಾರ್ಯಾಚರಣೆ ನಡೆಸುತ್ತಿದ್ದಾರೆ. ನಗರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ಅವರ ಉಸ್ತುವಾರಿಯಲ್ಲಿ 11 ವಿಭಾಗಗಳ ಡಿಸಿಪಿಗಳು ಹಾಗೂ ಸಿಸಿಬಿಯ ಇಬ್ಬರು ಡಿಸಿಪಿಗಳೂ ಸೇರಿದಂತೆ ಒಟ್ಟು 13 ಮಂದಿ ಡಿಸಿಪಿಗಳ ನೇತೃತ್ವದಲ್ಲಿ ಈ ಕಾರ್ಯಾಚರಣೆ ಕೈಗೊಳ್ಳಲಾಗಿದೆ. ನಗರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ಅವರ ಉಸ್ತುವಾರಿಯಲ್ಲಿ 11 ವಿಭಾಗಗಳ ಡಿಸಿಪಿಗಳು ಹಾಗೂ ಸಿಸಿಬಿಯ ಇಬ್ಬರು ಡಿಸಿಪಿಗಳೂ ಸೇರಿದಂತೆ ಒಟ್ಟು 13 ಮಂದಿ ಡಿಸಿಪಿಗಳ ನೇತೃತ್ವದಲ್ಲಿ ಈ ಕಾರ್ಯಾಚರಣೆ ಕೈಗೊಳ್ಳಲಾಗಿದೆ.ಇಂದು ಬೆಳಿಗ್ಗೆ



10 ಗಂಟೆಯಿಂದ ಈ ವಿಶೇಷ ಕಾರ್ಯಾಚರಣೆ ನಡೆಸುತ್ತಿದ್ದು, ಪ್ರಮುಖವಾಗಿ ಫ್ಯಾಕ್ಟರಿಗಳು, ಅಂಗಡಿಗಳು, ಗ್ಯಾರೇಜ್, ನಿರ್ಮಾಣ ಹಂತದ ಕಟ್ಟಡ ಹಾಗೂ ಹೋಟೆಲ್‌ಗಳು, ಪೆಟ್ರೋಲ್‌ಬಂಕ್‌ಗಳು, ಮಾಲ್‌ಗಳು ಸೇರಿದಂತೆ ಮುಂತಾದ ಸ್ಥಳಗಳಲ್ಲಿ ದಾಳಿ ಮಾಡಿ ಬಾಲ ಕಾರ್ಮಿಕರನ್ನು ಪತ್ತೆ ಹಚ್ಚುತ್ತಿದ್ದಾರೆ. ಈ ತನಕ ನಗರದಾದ್ಯಂತ 150

## 5 ವಿಶೇಷ ತಂಡಗಳನ್ನು ರಚನೆ

ಸೂಚನೆ ನೀಡಿದ ಕೆಲವೇ ನಿಮಿಷಗಳಲ್ಲಿ ಉತ್ತರ ವಿಭಾಗದ ಉಪ ಪೊಲೀಸ್ ಆಯುಕ್ತರ ಮಾರ್ಗದರ್ಶನದಲ್ಲಿ ಸಹಾಯಕ ಪೊಲೀಸ್ ಆಯುಕ್ತರು, ಪೊಲೀಸ್ ಆಯುಕ್ತರು, ಇನ್‌ಸ್ಪೆಕ್ಟರ್ ಹಾಗೂ ಲೇಬರ್ ಇನ್ಸ್‌ಪೆಕ್ಟರ್‌ಗಳನ್ನೊಳಗೊಂಡ 5 ವಿಶೇಷ ತಂಡಗಳನ್ನು ರಚನೆ ಮಾಡಲಾಗಿತ್ತು. ಅಂದು ಈ ತಂಡಗಳು ಕಾರ್ಯಾಚರಣೆ ನಡೆಸಿ ಹೊರ ರಾಜ್ಯದ ಕಾರ್ಮಿಕರು ಸೇರಿದಂತೆ 19 ಮಂದಿ ಬಾಲಕಾರ್ಮಿಕರನ್ನು ಎಪಿಎಂಸಿಯಲ್ಲಿ ಪತ್ತೆ ಹಚ್ಚಿ ರಕ್ಷಣೆ ಮಾಡಲಾಗಿತ್ತು.

ಕ್ಕೂ ಹೆಚ್ಚು ಬಾಲ ಕಾರ್ಮಿಕರನ್ನು ಪತ್ತೆ ಹಚ್ಚಿರುವ ಪೊಲೀಸರು, ಉತ್ತರ ವಿಭಾಗದಲ್ಲಿ ಒಟ್ಟು 60 ಮಂದಿ ಬಾಲಕಾರ್ಮಿಕರನ್ನು ಪತ್ತೆ ಹಚ್ಚಿ ರಕ್ಷಣೆ ಮಾಡಿದ್ದಾರೆ. ಬೆಳ್ಳಂಬೆಳಿಗ್ಗೆ ಎಪಿಎಂಸಿ ಮಾರುಕಟ್ಟೆಗೆ ಸಿಎಂ ಡಿ.ಕೆ.ಶಿವಕುಮಾರ್‌ರವರು ಭೇಟಿ ನೀಡಿ ರೈತರು, ಕಾರ್ಮಿಕರು, ವರ್ತಕರ ಸಮಸ್ಯೆಗಳನ್ನು ಆಲಿಸಿದ ಸಂದರ್ಭದಲ್ಲಿ ಬಾಲಕಾರ್ಮಿಕರು ಅಲ್ಲಿ ಇವರ ಕಣ್ಣಿಗೆ ಬಿದ್ದಿದ್ದಾರೆ.ಇದನ್ನು ಗಂಭೀರವಾಗಿ ಪರಿಗಣಿಸಿದ ಅವರು ಬಾಲಕಾರ್ಮಿಕರನ್ನು ಕೆಲಸಕ್ಕೆ ಇಟ್ಟುಕೊಂಡಿರುವ ಬಗ್ಗೆ ಕ್ರಮ ವಹಿಸುವಂತೆ ಹಾಗೂ ಬಾಲಕಾರ್ಮಿಕರ ರಕ್ಷಣೆ ಮಾಡುವಂತೆ ಸಿಎಂ ಸೂಚಿಸಿದ್ದರು.


5 ಪ್ರತ್ಯೇಕ ಪ್ರಕರಣಗಳನ್ನು ಆರ್‌ಎಂಸಿಆರ್ ಠಾಣೆ ಪೊಲೀಸರು ಪ್ರಕರಣ ದಾಖಲಿಸಿಕೊಳ್ಳಲಾಗಿದ್ದು, ತನಿಖೆ ಮುಂದುವರೆದಿದೆ. ನಗರದಾದ್ಯಂತ ನಡೆಯುತ್ತಿರುವ ಈ ವಿಶೇಷ ಕಾರ್ಯಾಚರಣೆ ಮುಗಿದ ನಂತರ ಎಷ್ಟು ಮಂದಿ ಬಾಲಕಾರ್ಮಿಕರನ್ನು ಪತ್ತೆ ಹಚ್ಚಲಾಗಿದೆ. ಎಷ್ಟು ಪ್ರಕರಣ ದಾಖಲು ಮಾಡಿಕೊಳ್ಳಲಾಗಿದೆ ಎಂಬ ನಿಖರ ಅಂಕಿಅಂಶಗಳು ತಿಳಿದುಬರಲಿದೆ.

# ಖಾಸಗಿ ಶಾಲಾ ಶಿಕ್ಷಕರಿಗೂ ರಾಜ್ಯ ಮಟ್ಟದ ಶಿಕ್ಷಕ ಪ್ರಶಸ್ತಿ ನೀಡುವ ಚಿಂತನೆ ಇದೆ: ಮಧು ಬಂಗಾರಪ್ಪ

## ಖಾಸಗಿ ಶಾಲೆಗಳ ಒಕ್ಕೂಟ ಸಲ್ಲಿಸಿರುವ ವಿವಿಧ ಬೇಡಿಕೆಗಳು ಸರ್ಕಾರದ ಗಮನದಲ್ಲಿವೆ; ವಿವಿಧ ಇಲಾಖೆಗಳೊಂದಿಗೆ ಚರ್ಚಿಸಿ ಸೂಕ್ತ ತೀರ್ಮಾನ

• ಉದಯವಾಹಿನಿ, ಬೆಂಗಳೂರು

ಖಾಸಗಿ ಶಾಲೆಗಳಲ್ಲಿ ಉತ್ತಮವಾಗಿ ಸೇವೆ ಸಲ್ಲಿಸುತ್ತಿರುವ ಶಿಕ್ಷಕರನ್ನೂ ರಾಜ್ಯ ಮಟ್ಟದ ಶಿಕ್ಷಕ ಪ್ರಶಸ್ತಿಗೆ ಪರಿಗಣಿಸುವಂತೆ ಬೇಡಿಕೆ ಇದ್ದು, ಈ ಬಗ್ಗೆ ಸರ್ಕಾರದ ಮಟ್ಟದಲ್ಲಿ ಚಿಂತನೆ ನಡೆಯುತ್ತಿದೆ. ಮುಂದೆ ಚರ್ಚಿಸಿ ತೀರ್ಮಾನ ತೆಗೆದುಕೊಳ್ಳಲಾಗುವುದು ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಮಧು ಬಂಗಾರಪ್ಪ ಹೇಳಿದ್ದಾರೆ. ಆನೇಕಲ್ ತಾಲ್ಲೂಕಿನ ಖಾಸಗಿ ಶಾಲೆಗಳ ಒಕ್ಕೂಟದ ವತಿಯಿಂದ ಅತ್ತಿಬೆಲೆಯ ಸೇಂಟ್ ಫಿಲೋಮಿನಾಸ್ ಸಂಸ್ಥೆ ಆವರಣದಲ್ಲಿ ಆಯೋಜಿಸಿದ್ದ ಪ್ರತಿಭಾ ಪುರಸ್ಕಾರ, 6ನೇ ವಾರ್ಷಿಕೋತ್ಸವ ಹಾಗೂ ಶಿಕ್ಷಕರ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಬೆಂಗಳೂರಿನ ಸಂಚಾರ ದಟ್ಟಣೆ ಹಿನ್ನೆಲೆಯಲ್ಲಿ ಶಾಲಾ ಸಮಯ ಬದಲಾವಣೆ ಮಾಡುವಂತೆ ಮನವಿ ಮಾಡಲಾಗಿದೆ. ಈ ಕುರಿತು ವಿವಿಧ ಇಲಾಖೆಗಳೊಂದಿಗೆ ಚರ್ಚಿಸಿ ಸೂಕ್ತ ತೀರ್ಮಾನ ಕೈಗೊಳ್ಳಲಾಗುವುದು ಎಂದು ತಿಳಿಸಿದರು. ಖಾಸಗಿ ಶಾಲೆಗಳ ಆರ್‌ಆರ್ ನವೀಕರಣ ,ಬೆಂಗಳೂರು ನಗರದಲ್ಲಿ ಸರ್ಕಾರಿ ನೌಕರರಿಗೆ ನೀಡಲಾಗುತ್ತಿರುವ ಮನೆ ಬಾಡಿಗೆ ಭತ್ಯೆಯನ್ನು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಸರ್ಕಾರಿ ಮತ್ತು ಅನುದಾನಿತ ಶಾಲೆಗಳ ಶಿಕ್ಷಕರಿಗೂ ನೀಡುವಂತೆ ವಿಧಾನ ಪರಿಷತ್ ಸದಸ್ಯ ಪುಟ್ಟಣ್ಣ ನೇತೃತ್ವದ ಸಮಿತಿ ಶಿಫಾರಸುಗಳನ್ನು ಮಾಡಿದೆ. ಈ ಕುರಿತು ಚರ್ಚಿಸಿ ನಿರ್ಧಾರ ಕೈಗೊಳ್ಳಲಾಗುವುದು ಎಂದರು. ಖಾಸಗಿ ಶಾಲೆಗಳು ಸರ್ಕಾರಕ್ಕೆ ಹಣ



ಪಾವತಿಸಲು ಸಿದ್ಧವಿದ್ದು, ಸರ್ಕಾರಿ ಪಠ್ಯಪುಸ್ತಕಗಳನ್ನು ನೀಡುವಂತೆ ಮನವಿ ಮಾಡಿರುವ ವಿಚಾರವೂ ಗಮನದಲ್ಲಿದೆ.

ಈ ಬೇಡಿಕೆಯನ್ನು ಪರಿಶೀಲಿಸಿ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು. ತಮ್ಮ ತಂದೆ ಹಾಗೂ ಮಾಜಿ ಮುಖ್ಯಮಂತ್ರಿ ಎಸ್. ಬಂಗಾರಪ್ಪ ಅವರು ಮುಖ್ಯಮಂತ್ರಿಯಾಗಿದ್ದ ಸಂದರ್ಭದಲ್ಲಿ ಸರ್ಕಾರಿ ಶಾಲೆಗಳ ಬಲವರ್ಧನೆ ಹಾಗೂ ಮಕ್ಕಳ ಹಾಜರಾತಿ ಹೆಚ್ಚಿಸುವ ಉದ್ದೇಶದಿಂದ 'ಅಕ್ಷಯ' ಕಾರ್ಯಕ್ರಮ ಜಾರಿಗೆ ತಂದಿದ್ದರು ಎಂದು ಸ್ಮರಿಸಿದರು. ಸರ್ಕಾರಿ ಶಾಲೆಗೆ ಪ್ರತಿನಿತ್ಯ ಹಾಜರಾಗುವ ಪ್ರತಿ ಮಗುವಿಗೂ ಒಂದು ರೂಪಾಯಿ ಪ್ರೋತ್ಸಾಹ ಧನ ನೀಡುವ ಮೂಲಕ ಮಕ್ಕಳನ್ನು ಶಾಲೆಯತ್ತ ಆಕರ್ಷಿಸುವ ಪ್ರಯತ್ನ ಮಾಡಲಾಗಿತ್ತು ಎಂದರು. ಶಿಕ್ಷಣ ಸಚಿವನಾಗಿ ಮೂರು ವರ್ಷಗಳ ಅವಧಿಯಲ್ಲಿ ಶಿಕ್ಷಣ ಕ್ಷೇತ್ರದ ಹಲವು ವಿಚಾರಗಳನ್ನು ತಿಳಿದುಕೊಂಡಿದ್ದೇನೆ. ಎರಡನೇ ಬಾರಿಯೂ ಸಚಿವನಾಗಿ ಸೇವೆ ಸಲ್ಲಿಸುವ ಅವಕಾಶ ದೊರೆತಿದೆ.

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಬೇರೆ ಇಲಾಖೆ ಬೇಕೇ ಎಂದು ದೂರವಾಣಿ ಮೂಲಕ ಕೇಳಿದರೂ, ಯಾವುದೇ ಮರು ಯೋಚನೆ ಮಾಡದೆ ಶಿಕ್ಷಣ ಇಲಾಖೆಯನ್ನೇ ಆಯ್ಕೆ ಮಾಡಿಕೊಂಡಿದ್ದೇನೆ ಎಂದು ಹೇಳಿದರು. ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಒಂದು ಕೋಟಿಗೂ ಹೆಚ್ಚು ಮಕ್ಕಳು ಇದ್ದಾರೆ. ಮಕ್ಕಳಿಗಾಗಿ ಕೆಲಸ ಮಾಡುವುದು ದೇವರ ಕೆಲಸ ಮಾಡಿದಂತೆ. ಶಿಕ್ಷಣ ಸಚಿವನಾಗಿ ರಾಜ್ಯದ ಶಿಕ್ಷಣ ವ್ಯವಸ್ಥೆಯಲ್ಲಿ ಸಾಕಷ್ಟು ಸುಧಾರಣೆಗಳನ್ನು ತರಲು ಪ್ರಾಮಾಣಿಕವಾಗಿ ಶ್ರಮಿಸುತ್ತಿದ್ದೇನೆ ಎಂದರು. ಖಾಸಗಿ ಶಾಲೆಗಳ ಪ್ರಥಮ ಮಾನ್ಯತೆ ಹಾಗೂ ಮಾನ್ಯತೆ ನವೀಕರಣಕ್ಕೆ ಸಂಬಂಧಿಸಿದ ನಿಯಮಗಳನ್ನು ಸಡಿಲಿಸುವ ಕುರಿತು ವಿಶೇಷ ಸದನ ಸಮಿತಿ ನೀಡಿರುವ ಮಧ್ಯಂತರ ವರದಿಯ ಶಿಫಾರಸುಗಳನ್ನು ಸರ್ಕಾರದ ಆದೇಶವಾಗಿ ಜಾರಿಗೆ ತರಬೇಕು ಎಂದು ಸಚಿವರಿಗೆ ಪುಟ್ಟಣ್ಣ ಮನವಿ ಮಾಡಿದರು. ಇದಕ್ಕೆ ಸಕಾರಾತ್ಮಕವಾಗಿ ಸ್ಪಂದಿಸಿದ ಸಚಿವ ಮಧು ಬಂಗಾರಪ್ಪ, ಸಮಿತಿಯ ಶಿಫಾರಸುಗಳನ್ನು ಇಲಾಖೆಗೆ ಕಳುಹಿಸಿಕೊಡಲಾಗಿದೆ.

ಈ ಕುರಿತು ಪರಿಶೀಲಿಸಿ ಆದ್ಯತೆ ಮೇರೆಗೆ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು. ಕಾರ್ಯಕ್ರಮದಲ್ಲಿ ಆನೇಕಲ್ ತಾಲ್ಲೂಕು ಶಾಸಕ ಶಿವಣ್ಣ, ವಿಧಾನ ಪರಿಷತ್ ಸದಸ್ಯರಾದ ಪುಟ್ಟಣ್ಣ, ರಾಮೋಜಿಗೌಡ, ಕಾಮ್ಸ್ ಕಾರ್ಯದರ್ಶಿ ಶಶಿಕುಮಾರ್, ಬೆಂಗಳೂರು ದಕ್ಷಿಣ ಡಿಡಿಪಿಐ ಜಯಪ್ರಕಾಶ್ ಸೇರಿದಂತೆ ಖಾಸಗಿ ಶಾಲೆಗಳ ಒಕ್ಕೂಟದ ಪದಾಧಿಕಾರಿಗಳು, ಶಿಕ್ಷಕರು ಹಾಗೂ ಇತರರು ಉಪಸ್ಥಿತರಿದ್ದರು.

### ಶಿಕ್ಷಣ ಸಚಿವರ ಕಾರ್ಯಕ್ಕೆ ಪುಟ್ಟಣ್ಣ ಮೆಚ್ಚುಗೆ

ವಿಧಾನ ಪರಿಷತ್ ಸದಸ್ಯ ಪುಟ್ಟಣ್ಣ ಮಾತನಾಡಿ, ಮಧು ಬಂಗಾರಪ್ಪ ಅವರು ಶಿಕ್ಷಣ ಸಚಿವರಾಗಿ ಹಲವು ಮಹತ್ವದ ಬದಲಾವಣೆಗಳನ್ನು ಜಾರಿಗೆ ತಂದಿದ್ದಾರೆ. ರಾಜ್ಯದ ವಿದ್ಯಾರ್ಥಿಗಳ ಫಲಿತಾಂಶದಲ್ಲೂ ಗಣನೀಯ ಸುಧಾರಣೆ ಕಂಡುಬಂದಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಎಸ್‌ಎಸ್‌ಎಲ್‌ಸಿ ಫಲಿತಾಂಶದಲ್ಲಿ ಹಿಂದೆ ಇದ್ದ ಪ್ರಮಾಣಕ್ಕೆ ಹೋಲಿಸಿದರೆ ಅನುತ್ತೀರ್ಣರಾಗುವ ವಿದ್ಯಾರ್ಥಿಗಳ ಸಂಖ್ಯೆ ಗಣನೀಯವಾಗಿ ಕಡಿಮೆಯಾಗಿದೆ. ಪಿಯುಸಿ ಫಲಿತಾಂಶದಲ್ಲೂ ಉತ್ತಮ ಪ್ರಗತಿ ಕಂಡುಬಂದಿದೆ. ಶಿಕ್ಷಣ ಕ್ಷೇತ್ರದಲ್ಲಿ ಮಧು ಬಂಗಾರಪ್ಪ ಅವರು ಕ್ರಾಂತಿಕಾರಿ ಕೆಲಸಗಳನ್ನು ಮಾಡುತ್ತಿದ್ದಾರೆ ಎಂದು ಹೇಳಿದರು.

**ಈ ದಿನದ ದರ** ಪೆಟ್ರೋಲ್: 111.68₹/L ಡೀಸೆಲ್ : 99.56₹/L ಬಂಗಾರ: ₹ 15,458/Gram 24ct ₹ 14,170 /Gram 22ct ಬೆಳ್ಳಿ: ₹245.00/

## ಮಸೀದಿ ಇರೋ ರಸ್ತೆಯಲ್ಲಿ ಗಣಪತಿ ಮೆರವಣಿಗೆ ಮಾಡಿದ್ರೆ ಗ್ರಹಚಾರ ಬಿಡಿಸ್ತೀನಿ: ಇನ್ಸ್‌ಪೆಕ್ಟರ್ ಧಮ್ಕಿ

• ಉದಯವಾಹಿನಿ, ಮೈಸೂರು


ಉದಯವಾಹಿನಿ ಚಿತ್ರ

ಮಸೀದಿ ಮುಂದೆ ಹೋಗಿ ಪಟಾಕಿ ಸಿಡಿಸಿದ್ರೆ ಏನ್ ಆಗುತ್ತೆ, ಮಸೀದಿ ಮುಂದೆಯೇ ಗಣೇಶ ಮೆರವಣಿಗೆ ಹೋಗಬೇಕು ಎನ್ನುವ ಆಗಿಲ್ಲ. ಎಂದು ಗಣೇಶ ಹಬ್ಬ ಮಾಡುವ ಯುವಕರಿಗೆ ಮೈಸೂರು ಜಿಲ್ಲೆಯ ಟಿ ನರಸೀಪುರ ಇನ್ಸ್ ಪೆಕ್ಟರ್ ಧನಂಜಯ ವಾರ್ನಿಂಗ್ ಕೊಟ್ಟಿದ್ದಾರೆ. ಗಣೇಶ ಪ್ರತಿಷ್ಠಾಪನೆ ಹಾಗೂ ವಿಸರ್ಜನೆ ವಿಚಾರದಲ್ಲಿ ಯುವಕರ ಗುಂಪಿಗೆ ಈ ವಾರ್ನಿಂಗ್ ನೀಡಿದ್ದಾರೆ. ನಾವು ಹಾಕಿಕೊಡುವ ಮಾರ್ಗದಲ್ಲೇ ಹೋಗಬೇಕು. ಮಸೀದಿ ಮುಂದೆ ಮೆರವಣಿಗೆ ಹೋಗುವಂತಿಲ್ಲ. ಅಕಸ್ಮಾತ್ ಹೋದರ ಹೇಳಲ್ಲ ಮಾಡಿ ತೋರಿಸ್ತೀನಿ ಎಂದು ಹೆದರಿಸಿದ್ದಾರೆ. ಈ ಬಾರಿ ಮಸೀದಿ ಮುಂದೆ ಪಟಾಕಿ ಹೊಡೆದ್ರೆ ಗ್ರಹಚಾರ ಬಿಡಿಸ್ತೇನೆ. ಅಲ್ಲಿ ನಾವು ಭದ್ರತೆ ಹಾಕ್ತೀರ್ವಿ. ನೀವು ಮೆರವಣಿಗೆ ಮಾಡುವ ರೂಟ್ ಕೊಟ್ಟು ಗಣಪತಿ ಕೂರಿಸಬೇಕು ಎಂಬ ಎಚ್ಚರಿಕೆ ಕೊಟ್ಟಿದ್ದಾರೆ.

## ಕೋಳಾಲ ಪ್ರಜಾ ಸೇವಾ ಅಭಿಯಾನ ಜನಸಭೆಯಲ್ಲಿ 150 ಅರ್ಜಿ ಸ್ವೀಕಾರ

• ಉದಯವಾಹಿನಿ, ಕೊರಟಗೆರೆ

ಗ್ರಾಮೀಣ ಭಾಗದ ಜನರ ಸಮಸ್ಯೆಗಳನ್ನು ಅರಿಯಲು ಜನರ ಬಳಿಗೆ ಸರ್ಕಾರ, ಜನರಿಗಾಗಿ ಸರ್ಕಾರ ಎಂಬುದು ಪ್ರಜಾ ಸೇವಾ ಅಭಿಯಾನ ಪ್ರಾರಂಭವಾಗಿದ್ದು, ಸಾಕಷ್ಟು ಅರ್ಜಿಗಳನ್ನು ಸ್ಥಳದಲ್ಲಿಯೇ ಪರಿಹಾರ ನೀಡಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ತುಮಕೂರು ಜಿಲ್ಲಾಧಿಕಾರಿ ಶುಭಕಲ್ಯಾಣ್ ತಿಳಿಸಿದರು. ತಾಲ್ಲೂಕಿನ ಕೋಳಾಲ ಗ್ರಾಮದ ಪಾರ್ವತಿ ಪರಮೇಶ್ವರ ಕಲ್ಯಾಣ ಮಂಟಪದಲ್ಲಿ ಆಯೋಜನೆ ಮಾಡಲಾಗಿದ್ದ ಪ್ರಜಾ ಸೇವಾ ಅಭಿಯಾನ ಕಾರ್ಯಕ್ರಮದಲ್ಲಿ ಅರ್ಜಿ ಸ್ವೀಕರಿಸಿ ಮಾತನಾಡಿದರು.

ಉಪಮುಖ್ಯಮಂತ್ರಿ ಹಾಗೂ ಕಂದಾಯ ಸಚಿವ


ಉದಯವಾಹಿನಿ ಚಿತ್ರ

ಡಾ.ಜಿ. ಪರಮೇಶ್ವರ ಮಾರ್ಗದರ್ಶನದಲ್ಲಿ ಕೋಳಾಲ ಗ್ರಾಮದಲ್ಲಿ ತಾಲ್ಲೂಕು ಆಡಳಿತ ಪ್ರಜಾ ಸೇವಾ ಅಭಿಯಾನ ಮಾಡಲಾಗುತ್ತಿದ್ದು, ಸಾರ್ವಜನಿಕರಿಂದ 150ಕ್ಕೂ ಹೆಚ್ಚು ಅರ್ಜಿಗಳು ಬಂದಿವೆ.

ಮುಖ್ಯವಾಗಿ ಭೂ ಮಾಪನ ಇಲಾಖೆಯ ತತ್ಕಾಲ್ ಪೋಡಿ, ದುರಸ್ಥಿ, ತಿದ್ದುಪಡಿ, ಆರ್.ಆರ್.ಟಿ ಆಗಿಲ್ಲ ಮತ್ತು 3-4 ತಿಂಗಳಿಂದ ದಿನಕ್ಕೆ 2 ಗಂಟೆಯಷ್ಟೇ ಪಂಪ್ ಸೆಟ್ ವಿದ್ಯುತ್ ನೀಡುತ್ತಿದ್ದು, ಹೆಚ್ಚಾಗಿ ವಿದ್ಯುತ್ ವ್ಯವಸ್ಥೆ ಕಲ್ಪಿಸುವಂತೆ ರೈತರು ಮನವಿ ಮಾಡಿದ್ದಾರೆ ಎಂದು ತಿಳಿಸಿದರು.

ಜಿಲ್ಲೆಯಲ್ಲಿ ವಾಡಿಕೆಗಿಂದ 25ರಷ್ಟು ಮಳೆ ಕಡಿಮೆಯಾಗಿದ್ದು, ಜಿಲ್ಲೆಯ 10 ತಾಲ್ಲೂಕುಗಳನ್ನು ಬರ ಘೋಷಣೆಯಾಗಿದೆ. 15 ಕೋಟಿ ಹಣ ಕುಡಿಯುವ ನೀರು ಹಾಗೂ ವಿವಿಧ ಕಾಮಗಾರಿಗಳಿಗೆ ಬಿಡುಗಡೆಯಾಗಿದೆ. ಬರದ ಪರಿಸ್ಥಿತಿ ನಿರ್ಮಾಣವಾಗಿರುವ ರಾಜ್ಯ ಸರ್ಕಾರ ಜಿಲ್ಲೆಗೆ 5 ಕೋಟಿ.ರೂ ನೀಡಿದ್ದು, ಇದನ್ನು ಕುಡಿಯುವ ನೀರು ನಿರ್ವಹಣೆಗೆ ಬಳಸಲಾಗುವುದು, ತುಮುಲ್ ವತಿಯಿಂದ ರೈತರಿಗೆ ಒಂದು ಲಕ್ಷದ ಎಂಪಿ ಮಿನಿ ಕಿಟ್ಸ್ ವಿತರಣೆ ಮಾಡಲಾಗುತ್ತಿದೆ, ಪಶು ಸಂಗೋಪನೆ ಇಲಾಖೆಯಿಂದ ರಾಜ್ಯಾದ್ಯಂತ ಹಸುಗಳಿಗೆ ಮಿನಿ ಕಿಟ್ಸ್ ವಿತರಿಸಲಾಗುತ್ತಿದೆ ಎಂದರು.

# ಜಿಲ್ಲಾಡಳಿತದಿಂದ ಭರವಸೆ; ಮಾತು ತಪ್ಪಿದರೆ ಮತ್ತೆ ಹೋರಾಟದ ಎಚ್ಚರಿಕೆ

### ಅರಣ್ಯ ಇಲಾಖೆಯವರಿಗೆ 1991-92ರಲ್ಲಿ ಕಂದಾಯ ಇಲಾಖೆ ಒಂದಷ್ಟು ಭೂಮಿಯನ್ನು ವರ್ಗಾವಣೆ ಮಾಡಿದ್ದಾರೆ ಎಂದು ಹೇಳಿ ವಿನಾಕಾರಣ ಗೊಂದಲ ಸೃಷ್ಟಿಯಾಗಿದೆ.

• ಉದಯವಾಹಿನಿ, ಚಿಕ್ಕಬಳ್ಳಾಪುರ

1 ದಲಿತ ರೈತ ಕಾರ್ಮಿಕರ ಐಕ್ಯ ಹೋರಾಟ
2 ಜಾತಿವಾದಿ ಮನಸ್ಸುಗಳಿಂದ ದಲಿತರಿಗೆ ಕಿರುಕುಳ
3 ಜನಪರ ಕಾಳಜಿಯಿಲ್ಲದ ಅಧಿಕಾರಿಗಳ ಕಾರಣ

ಚಿಕ್ಕಬಳ್ಳಾಪುರ : ನಂದಿ ಪಂಚಾಯಿತಿ ವ್ಯಾಪ್ತಿಯ ಶಿಂಗಾಡಿಕದಿರೇನಹಳ್ಳಿ ಗ್ರಾಮದ ಸರ್ವೆ ನಂ.67ರ ಭೂಮಿ ಸಮಸ್ಯೆ ಇತ್ಯರ್ಥಪಡಿಸಿ ಎಂದು ಪ್ರಾರಂಭಿಸಿದ್ದ ಅನಿರ್ಧಿಷ್ಠಾವಧಿ ಹೋರಾಟವು 90ನೇ ದಿನಕ್ಕೆ ಕಾಲಿಟ್ಟಿತು. ಭೂಮಿಯ ನ್ಯಾಯಕ್ಕಾಗಿ ಜಿಲ್ಲಾಡಳಿತ ಮತ್ತು ಅರಣ್ಯ ಇಲಾಖೆಗೆ 3 ತಿಂಗಳ ಗಡುವು ನೀಡುವ ಮೂಲಕ ದಲಿತ ರೈತ ಕಾರ್ಮಿಕರ ಐಕ್ಯ ಹೋರಾಟ ವೇದಿಕೆ ತಾತ್ಕಾಲಿಕವಾಗಿ ಧರಣಿ ವಾಪಸ್ಸು ಪಡೆಯಿತು.

ನಗರ ಹೊರವಲಯ ಉಪ ಅರಣ್ಯ ಇಲಾಖೆ ಸಂರಕ್ಷಣಾಧಿಕಾರಿಗಳ ಕಚೇರಿ ಬಳಿ ಕಳೆದ 90 ದಿನಗಳಿಂದ ದಲಿತ ರೈತ ಕಾರ್ಮಿಕರ ಐಕ್ಯ ಹೋರಾಟ ವೇದಿಕೆ ನಡೆಸುತ್ತಿದ್ದ ಧರಣಿಯ ಸ್ಥಳದಿಂದ ಉಪವಿಭಾಗಾಧಿಕಾರಿಗಳ ಕಛೇರಿವರೆಗೆ ಕಾಲ್ನಡಿಗೆ ಜಾಥಾ ನಡೆಸಿ ಜಿಲ್ಲಾಡಳಿತಕ್ಕೆ 3 ತಿಂಗಳ ಗಡುವು ನೀಡುವ ಮನವಿ ಸಲ್ಲಿಸುವ ಸಂದರ್ಭದಲ್ಲಿ ಜಿಲ್ಲಾಡಳಿತದ ಭರವಸೆಯಂತೆ ಹೋರಾಟವನ್ನು ಹಿಂಪಡೆಯಲಾಯಿತು. ಇದನ್ನು ಖಂಡಿಸಿ ಸಂತ್ರಸ್ಥ ರೈತರಿಗೆ ಭೂಒಡೆತನ ಕಲ್ಪಿಸಬೇಕು ಎಂದು ಕಳೆದ 90 ದಿನಗಳಿಂದ ಅಹೋರಾತ್ರಿ ಹೋರಾಟ ನಡೆಸಲಾಗಿದೆ.ನ್ಯಾಯಯುತ ಬೇಡಿಕೆಗಾಗಿ ಇಷ್ಟು ಸುಧೀರ್ಘ ಹೋರಾಟ ನಡೆಸಿದ್ದು ದಸಂಸ ಇತಿಹಾಸದಲ್ಲಿಯೇ ಇಲ್ಲ ಎಂದು ಬೇಸರಿಸಿದ ಅವರು ತಾಯಿಕರುಳಿನ ಗುಣವಿಲ್ಲದ ಜನಪ್ರತಿನಿಧಿಗಳು, ಜನಪರ ಕಾಳಜಿಯಿಲ್ಲದ ಅಧಿಕಾರಿಗಳ ಕಾರಣವಾಗಿಯೇ ಬಡವರು ಸರಕಾರಗಳಿಂದ ಶೋಷಣೆಗೊಳಗಾಗುತ್ತಿದ್ದಾರೆ ಎಂದರು. ಅರಣ್ಯ ಇಲಾಖೆಯವರಿಗೆ 1991-92ರಲ್ಲಿ ಕಂದಾಯ ಇಲಾಖೆ ಒಂದಷ್ಟು ಭೂಮಿಯನ್ನು ವರ್ಗಾವಣೆ ಮಾಡಿದ್ದಾರೆ ಎಂದು ಹೇಳಿ ವಿನಾಕಾರಣ ಗೊಂದಲ ಸೃಷ್ಟಿಯಾಗಿದೆ. ಅರಣ್ಯ ಇಲಾಖೆ ಮತ್ತು ಕಂದಾಯ ಇಲಾಖೆಯವರು ಸರಿಯಾದ ದಾಖಲೆಯನ್ನು ಪರಿಶೀಲಿಸದೆ ಗೊಂದಲ ಸೃಷ್ಟಿಸಿ


ಉದಯವಾಹಿನಿ ಚಿತ್ರ

ತಾಲ್ಲೂಕಿನ ನಂದಿ ಹೋಬಳಿ, ಸಿಂಗಾಟಕದಿರೇನಹಳ್ಳಿ ಗ್ರಾಮದ ದಲಿತರಿಗೆ 1972-73 ಸಾಲಿನಲ್ಲಿ ಅಕ್ರಮ ಸಕ್ರಮ ಕಾನೂನಡಿ ಸ.ನಂ. 67ರ ಭೂ ಮಂಜೂರಾತಿ ಆಗಿದೆ. ಅಂದಿನಿಂದ ಅವರು ಅಲ್ಲಿಯೇ ಬೆಳೆ ಬೆಳದು ಅನುಭವದಲ್ಲಿರುತ್ತಾರೆ. ಇತ್ತೀಚೆಗೆ ಅರಣ್ಯ ಇಲಾಖೆಯವರು ತಪ್ಪು ಮಾಹಿತಿಯಿಂದ ಹಾಗೂ ಜಾತಿವಾದಿ ಮನಸ್ಸುಗಳಿಂದ ದಲಿತರಿಗೆ ಕಿರುಕುಳ ನೀಡುತ್ತಿದ್ದಾರೆ.
ಎನ್.ಮುನಿಸ್ವಾಮಿ ದಸಂಸ ಮಾಜಿ ರಾಜ್ಯ ಸಂಚಾಲಕ

ದಲಿತರಿಗೆ ತೊಂದರೆ ಕೊಡುತ್ತಿದ್ದಾರೆ. ಇದನ್ನು ಪ್ರಶ್ನಿಸಿ ದಲಿತ ಸಂಘರ್ಷ ಸಮಿತಿ ಐಕ್ಯ ಹೋರಾಟ ಸಮಿತಿ ಹಲವು ರೀತಿಯ ಪ್ರತಿಭಟನೆಗಳನ್ನು ಮಾಡಿ ಸರ್ಕಾರದ ಗಮನಕ್ಕೆ ತಂದರೂ ಪ್ರಯೋಜನ ಆಗಿರುವುದಿಲ್ಲ. ಪರಿಣಾಮ ಭೂ ಪ್ರವೇಶ ಹೋರಾಟ ನಡೆಸಲಾಯಿತು.ಆಗ ಸ್ಥಳಕ್ಕೆ ಬಂದಿದ್ದ ಎ.ಸಿ ಅಶ್ವಿನ್ ಅವರು ಫಾರೆಸ್ಟ್ ಸೆಟಲ್‌ಮೆಂಟ್ ಆಫೀಸರ್ ಆಗಿ ನಾನೇ ಇರುವುದರಿಂದ ಇದನ್ನು ಇತ್ಯರ್ಥಪಡಿಸಲು 3 ತಿಂಗಳ ಕಾಲಾವಕಾಶ ಕೋರಿದ್ದರು. ಇದನ್ನೂ ನೋಡೇ ಬಿಡೋಣ ಎಂದು

**ತೀಕ್ಷವಾಗಿ ಇರಲಿದೆ ಎಚ್ಚರಿಕೆ**

ದಸಂಸ ರಕ್ತರಹಿತ ಕ್ರಾಂತಿಗೆ ಹೆಸರಾದ ಸಂಘಟನೆಯಾದ ಕಾರಣ ಈ ನೆಲದ ಕಾನೂನುಗಳಿಗೆ ಗೌರವ ನೀಡಿ ಜಿಲ್ಲಾಡಳಿತದ ಮನವಿಯಂತೆ, ಫಾರೆಸ್ಟ್ ಸೆಟಲ್ ಮೆಂಟ್ ಅಧಿಕಾರಿಯ ಭರವಸೆಯಂತೆ ಧರಣಿಯನ್ನು ತಾತ್ಕಾಲಿಕವಾಗಿ 3 ತಿಂಗಳ ಮಟ್ಟಿಗೆ ವಾಪಸ್ಸು ಪಡೆಯಲಾಗಿದೆ. ಈ ಅವಧಿಯಲ್ಲಿ ಜಿಲ್ಲಾಡಳಿತದಿಂದ ರೈತಪರವಾದ ತೀರ್ಮಾನ ಹೊರಬರುವ ನಿರೀಕ್ಷೆ ಹೊಂದಲಾಗಿದೆ. ನಮ್ಮ ಪರವಾದ ತೀರ್ಪು ಬಂದಲ್ಲಿ ಜಿಲ್ಲಾಡಳಿತವನ್ನು ಅಭಿನಂದಿಸುತ್ತೇವೆ.

ತೀರ್ಮಾನಿಸಿ ಹೋರಾಟವನ್ನು 90ನೇ ದಿನವಾದ ಸೆ.11ರಂದು ತಾತ್ಕಾಲಿವಾಗಿ ಹಿಂಪಡೆಯಲಾಗಿದೆ ಎಂದು ಘೋಷಿಸಿದರು. ಮುಖಂಡ ಕೆ.ಸಿ.ರಾಜಾಕಾಂತ್ ಮಾತನಾಡಿ ಸಿಂಗಾಡಿಕದಿರೇನಹಳ್ಳಿ ಭೂ ಹೋರಾಟ ಮಾಡು ಇಲ್ಲವೆ ಮಡಿ ಹೋರಾಟವಾಗಿತ್ತು.ಸಿಪಿಎಂ ಮುಖಂಡ ಮುನಿವೆಂಕಟಪ್ಪ ಮಾತನಾಡಿ ಸಿಂಗಾಡಿ ಕದಿರೇನಹಳ್ಳಿ ಧರಣಿ 90ನೇ ದಿನಕ್ಕೆ ಕಾಲಿಟ್ಟಿದೆ. ಇಷ್ಟು ದಿನಗಳಾದರೂ ಕಂದಾಯ ಮತ್ತು ಆರಣ್ಯ ಇಲಾಖೆಯ ಅಧಿಕಾರಿಗಳು ಸರಿಯಾದ ರೀತಿಯಲ್ಲಿ ಕ್ರಮಕ್ಕೆ ಪ್ರಯತ್ನ ಮಾಡದೆ ಜಾಣರಂತೆ ನಡೆದುಕೊಂಡಿರುವುದು ದಲಿತ ವಿರೋಧಿ ನೀತಿಯೇ ಆಗಿದೆ. ಜಿಲ್ಲೆಯ ಸರಕಾರಿ ಅಧಿಕಾರಿಗಳು ಜನಪ್ರತಿನಿಧಿಗಳು ಕೆಐಎಡಿಬಿ ಮತ್ತು ರಿಯಲ್ ಎಸ್ಟೇಟ್ ದಂಧೆಕೋರರ ಪರವಾಗಿ ಕೆಲಸ ಮಾಡುತ್ತಾ ಕೈಗಾರಿಕೆಗಳ ಸ್ಥಾಪನೆ ಹೆಸರಿನಲ್ಲಿ ಹೆಸರಿನಲ್ಲಿ ಲಕ್ಷಾಂತರ ಎಕರೆ ಭೂಮಿಯನ್ನು ಕೊಂಡು ರೈತರನ್ನು ದಿನಗೂಲಿ ಕಾರ್ಮಿಕರನ್ನಾಗಿ ಮಾಡು ತ್ತಿದ್ದಾರೆ. ಅರಣ್ಯ ಭೂಮಿ ಹೆಸರಿನಲ್ಲಿ ರೈತರನ್ನು ಭಯ ಭೀತರಾಗಿ ಮಾಡಿ ರೈತರ ಜಮೀನುಗಳಿಂದ ಒಕ್ಕಲೆಬ್ಬಿಸುವುದು ಸರಿಯಲ್ಲ. ಸಿಂಗಾಟಕದಿರೇನಹಳ್ಳಿ ದಲಿತರ ಭೂ ಸಮಸ್ಯೆಯನ್ನು ಕೂಡಲೇ ಇತ್ಯರ್ಥ ಪಡಿಸಬೇಕಾಗಿತ್ತು. ಜನಪ್ರತಿನಿಧಿಗಳು ಕೂಡ ಈ ವಿಚಾರದಲ್ಲಿ ಸಂಪೂರ್ಣ ವಿಫಲರಾಗಿದ್ದಾರೆ. ಇದೆಲ್ಲ ಇರಲಿ 1972-73ರಲ್ಲಿ ರೈತರಿಗೆ ಜಮೀನನ್ನು ಮಂಜೂರು ಮಾಡಿಕೊಟ್ಟ ಕಂದಾಯ ಇಲಾಖೆ ಅಧಿಕಾರಿಗಳು ಮೌನ ವಹಿಸಿರುವುದು ಎಷ್ಟು ಸರಿ ಎಂದು ಆಕ್ರೋಷ ವ್ಯಕ್ತಪಡಿಸಿದರು.ಈ ವೇಳೆ ಪ್ರತಿಭಟನಾ ಸ್ಥಳಕ್ಕಾಗಮಿಸಿದ ಪ್ರಭಾರ ಉಪ ವಿಭಾಗಾಧಿಕಾರಿ ಮಹೇಶ್ ಪತ್ರಿ ಮನವಿ ಸ್ವೀಕರಿಸಿ ಮಾತನಾಡಿ, ಹಿರಿಯ ಅಧಿಕಾರಿಗಳಿಗೆ ತಮ್ಮ ಮನವಿ ಸಲ್ಲಿಸುತ್ತೇವೆ.

## ಅರಮನೆ ಆವರಣದಲ್ಲಿ ಗಜಪಡೆ ಮಾವುತರಿಗೆ, ಕಾವಾಡಿಗಳಿಗೆ ಆಯುರ್ವೇದ ಚಿಕಿತ್ಸೆ

• ಉದಯವಾಹಿನಿ, ಮೈಸೂರು

ನಾಡಹಬ್ಬ ದಸರಾದ ಜಂಬೂ ಸವಾರಿಯಲ್ಲಿ ಭಾಗವಹಿಸಲು ಗಜಪಡೆಯೊಂದಿಗೆ ಆಗಮಿಸಿರುವ ಮಾವುತರ ,ಕಾವಾಡಿಗಳ ಕುಟುಂಬಕ್ಕೆ ಆಯುರ್ವೇದ ಪಂಚಕರ್ಮ ಚಿಕಿತ್ಸೆ ನೀಡಲು ಅರಮನೆಯ ಆವರಣದಲ್ಲಿ ತಾತ್ಕಲಿಕ ಚಿಕಿತ್ಸಾ ಕೇಂದ್ರವನ್ನು ಆರಂಭಿಸಲಾಗಿದೆ. ಗಜಪಡೆಗಳೊಂದಿಗೆ ಮಾವುತರನ್ನು ಆರೋಗ್ಯವಾಗಿಡಲು ಈ ಪಂಚಕರ್ಮ ಕೇಂದ್ರ ಆರಂಭಿಸಲಾಗಿದ್ದು, ಇಲ್ಲಿ ನೀಡುವ ಚಿಕಿತ್ಸೆ ಹೀಗಿದೆ. ಜಂಬೂ ಸವಾರಿಯಲ್ಲಿ ಭಾಗವಹಿಸುವ ಗಜಪಡೆಗೆ ತಾಲೀಮು ಹಾಗೂ ಆರೋಗ್ಯಕರ ಪೌಷ್ಠಿಕ ಆಹಾರ ನೀಡಿ ನಿತ್ಯ ಅರಣ್ಯ ಇಲಾಖೆಯ ಪಶುವೈದ್ಯರು ಗಜಪಡೆಗಳನ್ನು ನೋಡಿಕೊಳ್ಳುತ್ತಿದ್ದಾರೆ.

ಮತ್ತೊಂದು ಕಡೆ ಆನೆಗಳನ್ನು ನೋಡಿಕೊಳ್ಳುವ ಮಾವುತರು, ಕಾವಾಡಿಗಳ ಆರೋಗ್ಯ ಸಮಸ್ಯೆಗೆ ಇಂಗ್ಲಿಷ್ ಮೆಡಿಷನ್ ನೀಡದೆ, ಪ್ರಕೃತಿ ಮಡಿಲಿನಲ್ಲಿರುವ ಇವರಿಗೆ ಆಯುರ್ವೇದಿಕ್ ಚಿಕಿತ್ಸೆ ನೀಡಲು ಅರಮನೆ ಆವರಣದ ಜಯ ಮಾರ್ತಾಂಡ ದ್ವಾರದ ಬಳಿ ಆಯುಷ್ ಇಲಾಖೆ ಪಂಚಕರ್ಮ ಕೇಂದ್ರವನ್ನು ಆರಂಭಿಸಲಾಗಿದೆ.

ಗಜಪಡೆಯ ಮಾವುತರು ಹಾಗೂ ಕಾವಾಡಿಗಳು ನಗರ ಪ್ರದೇಶಕ್ಕೆ ಬಂದ ಸಂದರ್ಭದಲ್ಲಿ ಒತ್ತಡ ನಿರ್ವಹಣೆ, ಮಂಡಿನೋವು, ಆನೆ ಮೇಲೆ ಕುಳಿತ ಸಂದರ್ಭದಲ್ಲಿ ಬೆನ್ನು ನೋವು ಜೊತೆಗೆ ಜರ್ಮರೋಗ, ಸಂಧಿವಾತ, ಜ್ವರ, ಶೀತ, ಕೆಮ್ಮು ಸೇರಿದಂತೆ ವಿವಿಧ ರೀತಿಯ ಆರೋಗ್ಯ ಸಮಸ್ಯೆಗಳನ್ನು ಎದುರಿಸುತ್ತಾರೆ. ಇದಕ್ಕೆ ಪಂಚಕರ್ಮ ಹಾಗೂ ಆಯುರ್ವೆದ ಚಿಕಿತ್ಸೆ ಮೂಲಕ ಉಚಿತವಾಗಿ ಚಿಕಿತ್ಸೆ ಮತ್ತು ಔಷಧವನ್ನು ನೀಡಲಾಗುತ್ತದೆ.

# ಬಶೆಟ್ಟಹಳ್ಳಿಯಲ್ಲಿ ಪ್ರಜಾ ಸೇವಾ ಆಂದೋಲನ

• ಉದಯವಾಹಿನಿ, ಶಿಡ್ಲಘಟ್ಟ

ಸಾರ್ವಜನಿಕರ ಸಮಸ್ಯೆಗಳನ್ನು ನೇರವಾಗಿ ಆಲಿಸಿ, ಸಂಬಂಧಪಟ್ಟ ಇಲಾಖೆಗಳ ಮೂಲಕ ಪರಿಹಾರ ಕಲ್ಪಿಸುವ ಉದ್ದೇಶದಿಂದ ಪ್ರತಿ ಶನಿವಾರ 'ಪ್ರಜಾ ಸೇವಾ' ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುತ್ತಿದ್ದು ಸೆ.12ರಂದು ಬಶೆಟ್ಟಹಳ್ಳಿಯಲ್ಲಿ ಆಯೋಜಿಸಲಾಗಿದೆ ಎಂದು ತಹಶೀಲ್ದಾರ್ ಗಗನ ಸಿಂಧು ಹೇಳಿದರು.

ತಾಲ್ಲೂಕು ಕಚೇರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ, ಸರ್ಕಾರದ ನಿರ್ದೇಶನದಂತೆ ತಾಲ್ಲೂಕು ಹೋಬಳಿ ಮಟ್ಟದಲ್ಲಿ ಪ್ರಜಾ ಸೇವಾ ಕಾರ್ಯಕ್ರಮ ನಡೆಸಲಾಗುತ್ತಿದ್ದು, ಜನರು ತಮ್ಮ ಸಮಸ್ಯೆಗಳಿಗಾಗಿ ಕಚೇರಿಗಳಿಗೆ ಪದೇಪದೇ ಅಲೆದಾಡುವುದನ್ನು ತಪ್ಪಿಸಿ, ಆಡಳಿತ ವ್ಯವಸ್ಥೆಯನ್ನು ಜನರ ಬಳಿಗೆ ಕೊಂಡೊಯ್ಯುವುದು ಇದರ ಮುಖ್ಯ ಉದ್ದೇಶವಾಗಿದೆ ಎಂದರು.

ಸೆ.12ರಂದು ಬಶೇಟಹಳ್ಳಿ ಕೆಎನ್‌ಎಸ್ ಶಾಲೆಯಲ್ಲಿ ಪ್ರಜಾ ಸೇವಾ ಆಂದೋಲನ ನಡೆಯಲಿದೆ. ಬಶೆಟ್ಟಹಳ್ಳಿ ಹಾಗೂ ಸುತ್ತಮುತ್ತಲಿನ ಗ್ರಾಮಗಳ ಸಾರ್ವಜನಿಕರು ತಮ್ಮ


ಉದಯವಾಹಿನಿ ಚಿತ್ರ

ಸಮಸ್ಯೆಗಳು ಮತ್ತು ಅಹವಾಲುಗಳನ್ನು ಕಾರ್ಯಕ್ರಮದಲ್ಲಿ ಸಲ್ಲಿಸಬಹುದಾಗಿದೆ. ಕಂದಾಯ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಭಾಗವಹಿಸಿ ಸಾರ್ವಜನಿಕರಿಂದ ಅರ್ಜಿಗಳನ್ನು ಸ್ವೀಕರಿಸಿ, ಸಮಸ್ಯೆಗಳಿಗೆ ಸ್ಪಂದಿಸಲಿದ್ದಾರೆ ಎಂದು ತಿಳಿಸಿದರು.

ಸಾರ್ವಜನಿಕರು ತಮ್ಮ ಸಮಸ್ಯೆಗೆ ಸಂಬಂಧಿಸಿದ ಅರ್ಜಿಗಳನ್ನು ಸರಿಯಾದ ರೀತಿಯಲ್ಲಿ ಬರೆದು ಕೊಂಡು, ಅಗತ್ಯ ದಾಖಲೆಗಳೊಂದಿಗೆ ಸಲ್ಲಿಸಬೇಕು.

ಅರ್ಜಿಯಲ್ಲಿ ಸಮಸ್ಯೆಯನ್ನು ಸ್ಪಷ್ಟವಾಗಿ ನಮೂದಿಸುವುದರಿಂದ ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳಿಗೆ ಪರಿಶೀಲಿಸಿ ನಿಯಮಾನುಸಾರ ಕ್ರಮ ಕೈಗೊಳ್ಳಲು ಅನುಕೂಲವಾಗುತ್ತದೆ ಎಂದರು.

ಬಶೆಟ್ಟಹಳ್ಳಿ ಹಾಗೂ ಸುತ್ತಮುತ್ತಲಿನ ಗ್ರಾಮಗಳ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಇಂದು ನಡೆಯುವ ಪ್ರಜಾ ಸೇವಾ ಆಂದೋಲನದಲ್ಲಿ ಭಾಗವಹಿಸಿ. ನಿಮ್ಮ ಸಮಸ್ಯೆಗಳನ್ನು ಅಧಿಕಾರಿಗಳ ಗಮನಕ್ಕೆ ತಂದು ಪರಿಹಾರ ಪಡೆಯಿರಿ.

ಸಮಸ್ಯೆಗೆ ಸಂಬಂಧಿಸಿದ ಅರ್ಜಿಯನ್ನು ಸರಿಯಾಗಿ ಸಿದ್ಧಪಡಿಸಿಕೊಂಡು ಅಗತ್ಯ ದಾಖಲೆಗಳೊಂದಿಗೆ ಸಲ್ಲಿಸಿ. ಸಾರ್ವಜನಿಕರ ಸಮಸ್ಯೆಗಳಿಗೆ ಸಾಧ್ಯವಾದಷ್ಟು ತ್ವರಿತವಾಗಿ ನಿಯಮಾನುಸಾರ ಪರಿಹಾರ ಕಲ್ಪಿಸಲು ಅಧಿಕಾರಿಗಳು ಸ್ಪಂದಿಸಲಿದ್ದಾರೆ.

ಆದ್ದರಿಂದ ಯಾರೂ ಈ ಅವಕಾಶವನ್ನು ತಪ್ಪಿಸಿಕೊಳ್ಳದೆ ಕಾರ್ಯಕ್ರಮದ ಸದುಪಯೋಗ ಪಡೆದುಕೊಳ್ಳಬೇಕು'' ಎಂದು ತಹಶೀಲ್ದಾರ್ ಗಗನ ಸಿಂಧು ಸಾರ್ವಜನಿಕರಿಗೆ ಮನವಿ ಮಾಡಿದರು.

## ಬಸರಾಳು ಕೆರೆ-ಕಟ್ಟೆಗಳಿಗೆ ನೀರು ಹರಿಸಲು ರೈತರಿಂದ ರಸ್ತೆ ತಡೆ



• ಉದಯವಾಹಿನಿ, ಮಂಡ್ಯ

ಹೇಮಾವತಿ ನೀರು ಅವಲಂಬಿಸಿರುವ ಕೆರೆ-ಕಟ್ಟೆಗಳು ಒಣಗುತ್ತಿದ್ದು, ಜಾನುವಾರುಗಳಿಗೆ ಕುಡಿಯುವ ನೀರಿನ ಅಭಾವ ಉಂಟಾಗಿದೆ. ತಕ್ಷಣ ನಾಲೆಗಳಿಗೆ ನೀರು ಹರಿಸಬೇಕು ಎಂದು ಆಗ್ರಹಿಸಿ ತಾಲ್ಲೂಕಿನ ಬಸರಾಳು ಗ್ರಾಮದಲ್ಲಿ ರೈತರು ರಸ್ತೆ ತಡೆ ನಡೆಸಿದರು. ಬಸರಾಳು ಮುತ್ತೇಗೆರೆ ಸರ್ಕಲ್‌ನಲ್ಲಿ ಸೇರಿದ ರೈತರು, ಅಂತರ್ಜಲ ಕುಸಿದಿದ್ದು, ಜನ ಜಾನುವಾರುಗಳಿಗೆ ಕುಡಿಯುವ ನೀರಿನ ಹಾಹಾಕಾರ ಎದುರಾಗಿದೆ. ಹೇಮಾವತಿ ನಾಲೆಗಳಿಗೆ ನೀರು ಹರಿಸಿ, ಕೆರೆ-ಕಟ್ಟೆಗಳಿಗೆ ತುಂಬಿಸಬೇಕು ಎಂದು ಘೋಷಣೆ ಕೂಗಿದರು. ಬಸರಾಳು ಹೋಬಳಿ ಮಳೆಯಿಲ್ಲದೆ ಬರಡಾಗಿದೆ. ಕೆಆರ್‌ಎಸ್ ಅಣೆಕಟ್ಟೆಯಿಂದ ನೀರಿನ ಸೌಲಭ್ಯವಿಲ್ಲ.

ದೂರದ ತುಮಕೂರು ಹಾಗೂ ನಾಗಮಂಗಲ ಭಾಗದ ನಾಲೆಗಳಿಗೆ ನೀರು ಹರಿಸಲಾಗುತ್ತಿದೆ. ಬಸರಾಳು ಭಾಗದ ಕೆರೆಕಟ್ಟೆಗಳಿಗೆ ಮಾತ್ರ ಹನಿ ನೀರು ಹರಿಸುತ್ತಿಲ್ಲ. ಅಧಿಕಾರಿಗಳು ಸುಳ್ಳು ನೆಪ ಹೇಳುತ್ತಾ ರೈತರನ್ನು ಕಡೆಗಣಿಸುತ್ತಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ಸ್ಥಳಕ್ಕೆ ಬಂದ ಮಂಡ್ಯ ಉಪವಿಭಾಗಾಧಿಕಾರಿ ಶಿವಮೂರ್ತಿ ಅವರಿಗೆ ಮನವಿ ಸಲ್ಲಿಸಿದರು. ಅವರು ರೈತರಿಗೆ ನೀರು ಹರಿಸುವ ಭರವಸೆ ನೀಡಿದರು. ಮುಖಂಡರಾದ ಎಂ.ಜಿ.ತಿಮ್ಮೇಗೌಡ, ಕೆಂಚನಹಳ್ಳಿ ಪುಟ್ಟಸ್ವಾಮಿ, ಸೂಗೇಗೌಡ, ಪಟೇಲ್ ಆನಂದ್, ಬಸವರಾಜು, ಬಸವೇಗೌಡ, ಮೋಹನ್ ಭಾಗವಹಿಸಿದ್ದರು.

## ಜ್ಞಾನ ಮಾತ್ರವಲ್ಲ ಸಂಸ್ಕಾರವನ್ನೂ ಕಲಿಸಿ : ಶಿಕ್ಷಕರಿಗೆ ಶ್ರೀಗಳ ಕಿವಿಮಾತು

• ಉದಯವಾಹಿನಿ, ಗುಂಡ್ಲುಪೇಟೆ

ಮಕ್ಕಳಿಗೆ ಕೇವಲ ಜ್ಞಾನ ನೀಡುವುದಷ್ಟೇ ಅಲ್ಲದೆ, ಸಂಸ್ಕಾರ, ಸಂಸ್ಕೃತಿ ಹಾಗೂ ಜೀವನ ಮೌಲ್ಯಗಳನ್ನ ಕಲಿಸುವ ಮೂಲಕ ಉತ್ತಮ ವ್ಯಕ್ತಿತ್ವ ರೂಪಿಸಬೇಕು ಎಂದು ಪಡಗೂರು ಅಡವಿ ಮಠದ ಶ್ರೀ ಶಿವಲಿಂಗೇಂದ್ರ ಸ್ವಾಮೀಜಿ ಹೇಳಿದರು. ಪಟ್ಟಣದ ಶ್ರೀಮದ್ದಾನೇಶ್ವರ ಪಬ್ಲಿಕ್ ಶಾಲೆಯಲ್ಲಿ ಮದ್ದಾನೇಶ್ವರ ಚಾರಿಟಬಲ್ ಟ್ರಸ್ಟ್ ವತಿಯಿಂದ ಆಯೋಜಿಸಿದ್ದ ಶಿಕ್ಷಕರ ದಿನಾಚರಣೆ ಹಾಗೂ 2025-26 ನೇ ಸಾಲಿನ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು. ವಿದ್ಯಾರ್ಥಿಗಳಲ್ಲಿರುವ ಪ್ರತಿಭೆ ಹಾಗೂ ಕೌಶಲ್ಯವನ್ನ ಗುರುತಿಸಿ ಬೆಳೆಸುವ ಮಹತ್ತರ ಜವಾಬ್ದಾರಿ ಶಿಕ್ಷಕರ ಮೇಲಿದೆ. ಶಿಕ್ಷಕ ವೃತ್ತಿ ಅತ್ಯಂತ ಪವಿತ್ರವಾಗಿದ್ದು, ವಿದ್ಯಾರ್ಥಿಗಳಿಗೆ ಮಹನೀಯರ ಜೀವನ ಮೌಲ್ಯಗಳನ್ನ ಪರಿಚಯಿಸುವ ಮೂಲಕ ಅವರನ್ನ ಮಾನಸಿಕವಾಗಿ ಸದೃಢರನ್ನಾಗಿ ಮಾಡಬೇಕು ಎಂದರು. ಪುಸ್ತಕ ಓದುವ ಹವ್ಯಾಸ ಬೆಳೆಸಿಕೊಂಡು ನಿರಂತರ ಅಧ್ಯಯನ ಮಾಡಬೇಕು. ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರ ಅಧ್ಯಯನಶೀಲತೆ, ಜ್ಞಾನ ಹಾಗೂ ಸರಳತೆ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಶಿಷ್ಯರು ತಮ್ಮ ಗುರುಗಳಿಗೆ ಸದಾ ಗೌರವ ನೀಡಬೇಕು ಎಂದು ಸಲಹೆ ನೀಡಿದರು. ನಿವೃತ್ತ ಮುಖ್ಯ ಶಿಕ್ಷಕ ಎಸ್.ಎಂ. ಸಿದ್ದರಾಜಪ್ಪ ಮಾತನಾಡಿ, ಸಂಸ್ಕಾರ ಮೊದಲು ಮನೆಯಿಂದಲೇ ಕಲಿಯಬೇಕು.


ಉದಯವಾಹಿನಿ ಚಿತ್ರ

ತಾಯಿ ಮೊದಲ ಗುರು, ನಂತರ ಶಿಕ್ಷಕರು. ಜ್ಞಾನಕ್ಕಿಂತ ವಿವೇಕ ಮುಖ್ಯವಾಗಿದ್ದು, ವಿದ್ಯಾರ್ಥಿಗಳು ಹಿರಿಯರನ್ನು ನೋಡಿ ಕಲಿಯುವ ಗುಣ ಬೆಳೆಸಿಕೊಳ್ಳಬೇಕು. ಇಂದಿನ ಮಕ್ಕಳು ಮುಂದಿನ ನಾಯಕರು. ಹಿಂದೆ ಗುರು, ಮುಂದೆ ಗುರಿ ಇದ್ದರೆ ಜೀವನದಲ್ಲಿ ಸಾಧನೆ ಸಾಧ್ಯ ಎಂದರು. ನಿವೃತ್ತ ದೈಹಿಕ ಶಿಕ್ಷಕ ಶ್ರೀನಿವಾಸನಾಯಕ ಮಾತನಾಡಿ, ವಿದ್ಯಾರ್ಥಿಗಳು ಆರೋಗ್ಯದ ಕಡೆಗೂ ಗಮನಹರಿಸಿ, ಪ್ರತಿದಿನ ವೇಳಾಪಟ್ಟಿ ರೂಪಿಸಿಕೊಂಡು ವ್ಯಾಸಂಗ ಮಾಡುವಂತೆ ಸಲಹೆ ನೀಡಿದರು. ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ಮದ್ದಾನೇಶ್ವರ ಪಬ್ಲಿಕ್ ಶಾಲೆಯ ಪ್ರಾಂಶುಪಾಲ ಎಂ.ಪಿ. ನಟರಾಜು, ವೀರಶೈವ ಲಿಂಗಾಯತ ಮಹಾಸಭಾ ತಾಲ್ಲೂಕು ಘಟಕದ ಅಧ್ಯಕ್ಷ ಎಸ್. ಶಿವಪ್ರಸಾದ್, ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯ ಶಿಕ್ಷಕಿ ವೀಣಾ ಸೇರಿದಂತೆ ಶಿಕ್ಷಕರು, ಶಾಲೆಯ ಆಡಳಿತ ಮಂಡಳಿ, ಬೋಧಕ ಬೋಧಕೇತರ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಸುದ್ದೇಕುಂಟೆ ಚಿಕ್ಕಕೆರೆ ಜಾಲಿ ಮರಗಳಿಗೆ ಕೊಡಲಿ, ಅಧಿಕಾರಿಗಳ ನಿರ್ಲಕ್ಷ್ಯ

• ಉದಯವಾಹಿನಿ, ಕೊಡಿಗೇನಹಳ್ಳಿ

ಹೋಬಳಿಯ ಸುದ್ದೇಕುಂಟೆ ಚಿಕ್ಕ ಕೆರೆಯಲ್ಲಿ ಹಸಿರು ಜಾಲಿ ಮರಗಳನ್ನು ಮನಬಂದಂತೆ ಕಡಿಯುತ್ತಿದ್ದರೂ ಅಧಿಕಾರಿಗಳು ಕ್ರಮಕೈಗೊಳ್ಳುತ್ತಿಲ್ಲ ಎಂದು ಸಾರ್ವಜನಿಕರು ದೂರಿದ್ದಾರೆ. ತಾಲ್ಲೂಕಿನಲ್ಲಿ ಈ ವರ್ಷ ಮಳೆಯಿಲ್ಲದೆ ಬೆಳೆಗಳು ಒಣಗಿ ಹೋಗಿವೆ. ಅಂತರ್ಜಲ ಕುಸಿದಿದೆ. ಇಂತಹ ಸಂದರ್ಭದಲ್ಲಿ ಕೆರೆಯಲ್ಲಿದ್ದ 1,500ಕ್ಕೂ ಹೆಚ್ಚು ದೊಡ್ಡ ಜಾಲಿ ಮರಗಳು ಮಾಯವಾಗಿವೆ. ಜಾನುವಾರುಗಳಿಗೆ ನೆರಳು ನೀಡುತ್ತಿದ್ದ, ಪಕ್ಷಿಗಳಿಗೆ ಆಶ್ರಯವಾಗಿದ್ದ ಈ ಮರಗಳನ್ನು ಕಡಿಯಲಾಗಿದೆ. ಕಳೆದ ಕೆಲವು ದಿನಗಳಿಂದ ಸುಮಾರು 1,000ಕ್ಕೂ ಹೆಚ್ಚು ಮರಗಳನ್ನು ಬುಡ ಸಮೇತ ಕಡಿದು ಸಾಗಿಸಿದ್ದಾರೆ ಎಂದು ಆರೋಪಿಸಿದ್ದಾರೆ.


ಉದಯವಾಹಿನಿ ಚಿತ್ರ

ಪ್ರಶ್ನಿಸಿದರೆ ಬೆದರಿಕೆ ಹಾಕುತ್ತಾರೆ. ಈ ಬಗ್ಗೆ ಅರಣ್ಯ ಇಲಾಖೆ ಅಧಿಕಾರಿಗಳಿಗೆ ಮಾಹಿತಿ ನೀಡಿದರೂ ಕ್ರಮ ಕೈಗೊಂಡಿಲ್ಲ. ಕೂಡಲೇ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಂಡು, ಕೆರೆಯಲ್ಲಿ ಮತ್ತೆ ಗಿಡ ನೆಡಬೇಕು' ಎಂದು ಗ್ರಾಮಸ್ಥರು ಒತ್ತಾಯಿಸಿದ್ದಾರೆ.

# ಸತೀಶ ಜಾರಕಿಹೊಳಿ ಸಂಭಾವಿತ ವ್ಯಕ್ತಿ, ಅವರ ಜತೆ ನಿಲ್ಲುವೆ: ಕೆ.ಎನ್.ರಾಜಣ್ಣ

### ಇನ್ನೂ ನಾಲ್ಕೈದು ಸಚಿವರ ಮೇಲೆ ED ದಾಳಿ ಹೇಳಿಕೆ': ಈ ರೀತಿಯ ರೇಡ್‌ನಲ್ಲಿ ಅವರು ಪರಿಣಿತರು


• ಉದಯವಾಹಿನಿ, ತುಮಕೂರು

ಸಚಿವ ಸತೀಶ ಜಾರಕಿಹೊಳಿ ವ್ಯವಹಾರದಲ್ಲಿ ಶ್ರೇಷ್ಠ ವ್ಯಕ್ತಿ. ಯಾವುದೇ ವಿಚಾರದಲ್ಲಿ ತಪ್ಪು ಮಾಡುವುದಿಲ್ಲ. ಅವರನ್ನು ನಾಲ್ಕು ದಶಕಗಳಿಂದ ನೋಡಿರುವೆ. ಅವರು ಸಂಭಾವಿತ ವ್ಯಕ್ತಿ ಎಂದು ಶಾಸಕ ಕೆ.ಎನ್.ರಾಜಣ್ಣ ಹೇಳಿದರು. ನಗರದಲ್ಲಿ ಶನಿವಾರ ಸುದ್ದಿಗಾರರ ಜತೆಗೆ ಮಾತನಾಡಿ, 'ಸತೀಶ ಅವರನ್ನು ಭೇಟಿ ಮಾಡಲು ಅವರ ಮನೆಗೆ ಹೋಗಿದ್ದೆ. ಕೆಲಸದ ನಿಮಿತ್ತ ಹೊರಗಡೆ ಹೋಗಿದ್ದರು. ಅವರ ಕುಟುಂಬ ಮತ್ತು ಅಭಿಮಾನಿಗಳ ಜತೆಗೆ ಮಾತನಾಡಿರುವೆ. ನಾನು ಸತೀಶ ಜತೆಗೆ ನಿಲ್ಲುವೆ ಎಂಬ ಭರವಸೆ ಕೊಟ್ಟಿರುವೆ ಎಂದು ಹೇಳಿದರು.

1 ಪಟ್ಟಣದ ಪ್ರವಾಸಿ ಮಂದಿರದಲ್ಲಿ ಶುಕ್ರವಾರ ನಡೆದ ಸುದ್ದಿಗೋಷ್ಠಿ
2 ಗಣಿಗಾರಿಕೆ ನಡೆಸಲು 750 ಕೋಟಿ ಹಣ ಹೂಡಿಕೆ
3 ಮಾಹಿತಿಗಳಿಗೆ ಯಾವುದೇ ದೃಢವಾದ ಆಧಾರವಿಲ್ಲ.

ಇ.ಡಿ ಅಧಿಕಾರಿಗಳು ಸಚಿವರ ಸರ್ಕಾರಿ ಬಂಗಲೆಗೆ ಹೋಗಿ ಅವರನ್ನು ಕೂರಿಸಿಕೊಂಡು ತನಿಖೆ ಮಾಡುವುದು ಏನಿತ್ತು? ಅವರದ್ದು ವಾರ್ಷಿಕ 2 ಸಾವಿರ ಕೋಟಿ ವ್ಯವಹಾರ ಇದೆ. ಮನೆಯಲ್ಲಿ 2 ಕೋಟಿ ಹಣ ಸಿಕ್ಕರೆ ಅದೇನು ದೊಡ್ಡದೇ ಇದು ರಾಜಕೀಯ ಪ್ರೇರಿತ ದಾಳಿ' ಎಂದು ಖಂಡಿಸಿದರು. ಕೇಂದ್ರ ಸರ್ಕಾರ ಎಲ್ಲಾ ತನಿಖಾ ಸಂಸ್ಥೆಗಳನ್ನು ದುರ್ಬಳಕೆ ಮಾಡಿಕೊಳ್ಳುತ್ತಿದೆ. ಸತೀಶ ಅವರ ಜನಪ್ರಿಯತೆ ಕುಗ್ಗಿಸುವ ಪ್ರಯತ್ನ ಇದು. ನಾವೆಲ್ಲರೂ


ಉದಯವಾಹಿನಿ ಚಿತ್ರ



ಶೂದ್ರರು. ಶೂದ್ರರಿಗೆ ಬುದ್ಧಿ ಕಡಿಮೆ ಅಂತ ಟಾರ್ಗೆಟ್ ಮಾಡುತ್ತಾರೆ ಎಂದು ದೂರಿದರು. ಇನ್ನೂ ನಾಲ್ಕೈದು ಸಚಿವರ ಮೇಲೆ ರೇಡ್ ಆಗಬಹುದು ಎಂದು ಹೇಳಿರುವ ಸಿಎಂ ಮಾತಿಗೆ ಪ್ರತಿಕ್ರಿಯಿಸಿದ ಅವರು, ನೀವು ಅವರನ್ನೇ ಕೇಳಬೇಕು. ಈ ರೀತಿಯ ರೇಡ್‌ನಲ್ಲಿ ಅವರು ಪರಿಣತರು. ಇದರ ಹಿಂದೆ ಯಾರದ್ದಾದರೂ ಕೈವಾಡ ಇರಬಹುದು ಎಂದು ಕಿಡಿಕಾರಿದರು. **ಅಪೆಕ್ಸ್ ಬ್ಯಾಂಕ್:** ಎರಡನೇ ಅವಧಿಗೆ ನಾನು ಆಕಾಂಕ್ಷಿ ಅಪೆಕ್ಸ್ ಬ್ಯಾಂಕ್ ಅಧ್ಯಕ್ಷ ಸ್ಥಾನ ಕೈತಪ್ಪಿದ ವಿಚಾರಕ್ಕೆ ಪ್ರತಿಕ್ರಿಯಿಸಿ, '**ರಾಜಕೀಯದಲ್ಲಿ ಸ್ಥಿತ್ಯಂತರ ಯಾವಾಗ ಬೇಕಾದರೂ:** ಹೇಗೆ ಬೇಕಾದರೂ ಬರಬಹುದು. ಅಪೆಕ್ಸ್ ಬ್ಯಾಂಕ್ ಅಧ್ಯಕ್ಷ ಸ್ಥಾನದ ಎರಡನೇ ಅವಧಿಗೆ ನಾನು ಆಕಾಂಕ್ಷಿ ಅಲ್ಲ. ನನ್ನನ್ನು ಮನವೊಲಿಸಿದ್ದಾರೋ, ಬಿಟ್ಟಿದ್ದಾರೋ ಗೊತ್ತಿಲ್ಲ. ಅಸತ್ಯ ಕ್ಷಣಿಕ. ಸತ್ಯಕ್ಕೆ ಆಯಸ್ಸು ಜಾಸ್ತಿ. ಅಂತಿಮವಾಗಿ ಸತ್ಯಕ್ಕೆ ಜಯ ಸಿಗಲಿದೆ' ಎಂದರು.

'ಅಧಿಕಾರ ಬರುತ್ತದೆ, ಹೋಗುತ್ತದೆ. ಅದೇನು ನಮ್ಮಪ್ಪನ ಆಸ್ತಿ ಅಲ್ಲ. ನನಗೇನೂ ನಷ್ಟ ಇಲ್ಲ. ಸಮಯವೇ ತೀರ್ಮಾನ ಮಾಡಲಿದೆ. ಈಗ ಆಯ್ಕೆ ಆಗಿರುವವರು ನನಗಿಂತ ಸಮರ್ಥರು. ಅವರಿಗೆ ಒಳ್ಳೆಯದಾಗಲಿ' ಎಂದರು.

**ಯಾವ ಪಕ್ಷಕ್ಕೂ ಸೇರಲ್ಲ**

ಕೆ.ಎನ್.ರಾಜಣ್ಣ ಜೆಡಿಎಸ್ ಅಥವಾ ಬಿಜೆಪಿಗೆ ಹೋಗುತ್ತಾರೆ ಎಂಬ ವಿಚಾರಕ್ಕೆ, ನಾನು ಯಾವ ಪಕ್ಷಕ್ಕೂ ಹೋಗುವುದಿಲ್ಲ. ನಾನು ಮತ್ತೆ ಚುನಾವಣೆಗೆ ನಿಲ್ಲವುದೋ, ಬೇಡವೋ ಎಂಬ ಗೊಂದಲದಲ್ಲಿದ್ದೇನೆ. ನಿಲ್ಲಬೇಕು ಎಂಬು ಕಾಲ ಬಂದರೆ ಕಾಂಗ್ರೆಸ್ ನಿಂದಲೇ ಸ್ಪರ್ಧಿಸುವೆ. ಎಲ್ಲಾ ಜಾತಿಯ ನಾಯಕರಿಗೂ ಗೌರವ ಕೊಡುವ ಪಕ್ಷ ಕಾಂಗ್ರೆಸ್ ನನಗೆ ಅಧಿಕಾರ ಯಾವತ್ತು ಸುಲಭವಾಗಿ ಬಂದಿಲ್ಲ. ಎಲ್ಲಾ ಅಧಿಕಾರಗಳು ಕಷ್ಟದಿಂದಲೇ ಸಿಕ್ಕಿವೆ. ಈ ಅವಕಾಶಗಳಿಂದ ಜನರ ವಿಶ್ವಾಸ ಗಳಿಸಿದ್ದೇನೆ' ಎಂದರು.

ಸಚಿವ ಸತೀಶ್ ಜಾರಕಿಹೊಳಿ ಅವರನ್ನು ಕಳೆದ ನಾಲ್ಕು ದಶಕಗಳಿಂದ ನೋಡಿದ್ದೇನೆ. ಅವರು ವ್ಯವಹಾರದಲ್ಲಿ ಶ್ರೇಷ್ಠ ವ್ಯಕ್ತಿ. ಯಾವುದೇ ವಿಚಾರದಲ್ಲೂ ತಪ್ಪು ಮಾಡುವುದಿಲ್ಲ. ಸತೀಶ್ ಜಾರಕಿಹೊಳಿ ಒಬ್ಬ ಸಂಭಾವಿತ ವ್ಯಕ್ತಿಯಾಗಿದ್ದು, ನಾನು ಅವರ ಜೊತೆ ನಿಲ್ಲುತ್ತೇನೆ. ಕೆ.ಎನ್.ರಾಜಣ್ಣ ಶಾಸಕ

## ಮಿನಿ ನ್ಯೂಸ್

### ಶೀಘ್ರದಲ್ಲೇ ಮತ್ತೆ 100 ಕೋಟಿ ರೂಪಾಯಿ ಅನುದಾನ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಹುಳಿಯಾರು

ಕಳೆದ ಮೂರು ವರ್ಷಗಳಲ್ಲಿ ತಾಲ್ಲೂಕಿನ ಅಭಿವೃದ್ಧಿಗಾಗಿ ಸುಮಾರು 600 ಕೋಟಿ ರೂಪಾಯಿ ಅನುದಾನ ತಂದು ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಂಡಿರುವ ತೃಪ್ತಿ ಇದೆ ಎಂದು ಶಾಸಕ ಕೆ.ಎಚ್ .ಪುಟ್ಟಸ್ವಾಮಿಗೌಡ ಹೇಳಿದರು. ತಮ್ಮ ಗೃಹ ಕಚೇರಿಯಲ್ಲಿ ನಡೆದ ಸೇರ್ಪಡೆ ಕಾರ್ಯಕ್ರಮದಲ್ಲಿ ಡಿ.ಪಾಳ್ಯ ಹೋಬಳಿಯ ಒಂಟಿಮನೆಹಳ್ಳಿ ಹಾಗೂ ಸೂರ್ಯನಾಯಕನಹಳ್ಳಿ ಗ್ರಾಮದ ಕಾಂಗ್ರೆಸ್ ಮತ್ತು ಬಿಜೆಪಿ ಪಕ್ಷಗಳ ಹಲವು ಕಾರ್ಯಕರ್ತರನ್ನು ತಮ್ಮ ಬಣಕ್ಕೆ ಸ್ವಾಗತಿಸಿ ಮಾತನಾಡಿದರು. ಗ್ರಾಮೀಣ ಪ್ರದೇಶಗಳ ರಸ್ತೆ, ಚರಂಡಿ, ಶಾಲಾ ಹಾಗೂ ಅಂಗನವಾಡಿ ಕೊಠಡಿಗಳ ನಿರ್ಮಾಣ, ಸೇತುವೆ, ಚೆಕ್‌ಡ್ಯಾಂ, ಶುದ್ಧ ಕುಡಿಯುವ ನೀರಿನ ಘಟಕ ಸೇರಿದಂತೆ ಹಲವು ಜನೋಪಯೋಗಿ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ. ಆದರೆ ಕೆಲವರಿಗೆ ತಾಲ್ಲೂಕಿನಲ್ಲಾಗಿರುವ ಅಭಿವೃದ್ಧಿ ಕಾಮಗಾರಿಗಳು ಕಾಣಿಸುತ್ತಿಲ್ಲ ಎಂದು ತಮ್ಮ ರಾಜಕೀಯ ವಿರೋಧಿಗಳ ವಿರುದ್ಧ ವ್ಯಂಗ್ಯವಾಡಿದರು. ಕಾಮಗಾರಿಗಳನ್ನು ಕೈಗೆತ್ತಿಕೊಳ್ಳ ಲಾಗುವುದು ಎಂದು ಭರವಸೆ ನೀಡಿದರು.

ಮುಖಂಡರಾದ ಆರ್.ಆರ್.ರೆಡ್ಡಿ, ನಾಗೇಂದ್ರ, ವಿಜಯಕುಮಾರ್ ಸೇರಿದಂತೆ ಒಂಟಿಮನೆಹಳ್ಳಿ ಹಾಗೂ ಸೂರ್ಯನಾಯಕನಹಳ್ಳಿ ಗ್ರಾಮದ ಹಲವು ಮುಖಂಡರು ಮತ್ತು ಕಾರ್ಯಕರ್ತರು ಉಪಸ್ಥಿತರಿದ್ದರು.

### ಖಾಸಗಿ ಕೊಳವೆಬಾವಿಗಳ ಮೂಲಕ ನೀರು ಪೂರೈಕೆ: ಡಾ.ನವೀನ್ ಭಟ್


ಉದಯವಾಹಿನಿ ಚಿತ್ರ

• ಉದಯವಾಹಿನಿ, ಚಿಕ್ಕಬಳ್ಳಾಪುರ

ಜಿಲ್ಲೆಯಲ್ಲಿ 44 ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗಿದ್ದು, ಮುಂದಿನ ದಿನಗಳಲ್ಲಿ 104 ಗ್ರಾಮಗಳಲ್ಲಿ ಸಮಸ್ಯೆ ಉಲ್ಬಣಿಸುವ ಸಾಧ್ಯತೆ ಹಿನ್ನೆಲೆಯಲ್ಲಿ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ. ನವೀನ್ ಭಟ್ ತಿಳಿಸಿದರು.ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಗ್ರಾಮೀಣ ಕುಡಿಯುವ ನೀರಿನ ಸಮಸ್ಯೆಗಳು ಹಾಗೂ ಎನ್‌ಆರ್‌ಎಲ್‌ಎಂಸಂಜೀವಿನಿ ಸ್ವಸಹಾಯ ಸಂಘಗಳ ಮಾಸಿಕ ಸಂತೆಗಳ ವಾರ್ಷಿಕ ಕ್ಯಾಲೆಂಡರ್ ಕುರಿತು ನಡೆದ ಮಾಧ್ಯಮಗೋಷ್ಠಿಯಲ್ಲಿ ಮಾತನಾಡಿದರು. ಪ್ರಸ್ತುತ ನೀರಿನ ಸಮಸ್ಯೆ ಇರುವ ಗ್ರಾಮಗಳಲ್ಲಿ ಖಾಸಗಿ ಕೊಳವೆಬಾವಿಗಳ ಮೂಲಕ ನೀರು ಪೂರೈಸ ಲಾಗುತ್ತಿದೆ. ನೀರಿನ ಸಮಸ್ಯೆಗೆ ಸಂಬಂಧಿಸಿದಂತೆ ಸಾರ್ವಜನಿಕರಿಂದ ತ್ವರಿತವಾಗಿ ದೂರು ಸ್ವೀಕರಿಸಿ ಪರಿಹರಿಸಲು 8884777235 ಸಹಾಯವಾಣಿ ಆರಂಭಿಸಲಾಗಿದೆ. ಇದುವರೆಗೆ ಶುದ್ಧ ಕುಡಿಯುವ ನೀರಿನ ಘಟಕಗಳ ದುರಸ್ತಿ, ನೀರಿನ ಪೈಪ್‌ಲೈನ್ ಹಾಗೂ ಜಲಜೀವನ್ ಮಿಷನ್ ಕಾಮಗಾರಿಗಳ ವಿಳಂಬಕ್ಕೆ ಸಂಬಂಧಿಸಿದಂತೆ 116 ಕರೆಗಳು ಬಂದಿದ್ದು, ಎಲ್ಲಾ ಸಮಸ್ಯೆಗಳಿಗೂ ಪರಿಹಾರ ಕಲ್ಪಿಸಲಾಗಿದೆ ಎಂದರು. 1,159 ಶುದ್ಧ ಕುಡಿಯುವ ನೀರಿನ ಘಟಕಗಳಿದ್ದು, 639 ಘಟಕಗಳು ಗ್ರಾ.ಪಂ.ಗಳ ನಿಯಂತ್ರಣದಲ್ಲಿದ್ದರೆ, 520 ಘಟಕಗಳು ಖಾಸಗಿ ನಿರ್ವಹಣೆಯಲ್ಲಿವೆ. ದುರಸ್ತಿಗೆ ಒಳಗಾದ 29 ಘಟಕಗಳನ್ನು ತೆರವುಗೊಳಿಸುವ ಪ್ರಕ್ರಿಯೆ ನಡೆಯುತ್ತಿದೆ ಎಂದು ತಿಳಿಸಿದರು.10 ಸಾವಿರ ಸ್ವಸಹಾಯ ಸಂಘಗಳಿದ್ದು, 1.30 ಲಕ್ಷ ಮಹಿಳೆಯರು ಸದಸ್ಯರಾಗಿದ್ದಾರೆ. ಮಹಿಳೆಯರು ತಯಾರಿಸುವ ಉತ್ಪನ್ನಗಳಿಗೆ ಮಾರುಕಟ್ಟೆ ಒದಗಿಸುವ ಉದ್ದೇಶದಿಂದ ಮಾಸಿಕ ಸಂತೆಗಳ ವಾರ್ಷಿಕ ಕ್ಯಾಲೆಂಡರ್ ರೂಪಿಸಲಾಗಿದೆ.

### 6303 ಮಂದಿಗೆ ನೋಟಿಸ್ ಜಾರಿ; 2736 ಮತದಾರರ ವಿಚಾರಣೆ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಚಾಮರಾಜನಗರ

ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಸಂಬಂಧ ಜಿಲ್ಲೆಯಲ್ಲಿ 7,480 ಮಂದಿಗೆ ನೋಟಿಸ್ ಸಿದ್ಧಪಡಿಸಲಾಗಿದ್ದು 6,303 ಮತದಾರರಿಗೆ ನೋಟಿಸ್ ಜಾರಿ ಮಾಡಲಾಗಿದೆ. 2,736 ಮತದಾರರ ವಿಚಾರಣೆ ನಡೆಸಲಾಗಿದೆ ಎಂದು ಜಿಲ್ಲಾಧಿಕಾರಿ ಶ್ರೀರೂಪಾ ತಿಳಿಸಿದರು. ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಕುರಿತು ಪ್ರಕಟಿಸಿರುವ ಕರಡು ಮತದಾರರ ಪಟ್ಟಿಗೆ ಸಂಬಂಧಿಸಿದಂತೆ ಸ್ವೀಕೃತವಾಗಿರುವ ಹಕ್ಕು ಮತ್ತು ಆಕ್ಷೇಪಣೆಗಳ ಬಗ್ಗೆ ರಾಜಕೀಯ ಪಕ್ಷಗಳ ಪ್ರತಿನಿಧಿಗಳ ಜೊತೆ ಸಭೆ ನಡೆಸಿ ಮಾತನಾಡಿದ ಜಿಲ್ಲಾಧಿಕಾರಿ, ಹನೂರು ವಿಧಾನಸಭಾ ಕ್ಷೇತ್ರದಲ್ಲಿ 679, ಕೊಳ್ಳೇಗಾಲ ವಿಧಾನಸಭಾ ಕ್ಷೇತ್ರದಲ್ಲಿ 65, ಚಾಮರಾಜನಗರ ವಿಧಾನಸಭಾ ಕ್ಷೇತ್ರದಲ್ಲಿ 2,503, ಗುಂಡ್ಲುಪೇಟೆ ವಿಧಾನಸಭಾ ಕ್ಷೇತ್ರದಲ್ಲಿ 3,056 ಮತದಾರರು ಸೇರಿದಂತೆ 6,303 ಮಂದಿಗೆ ನೋಟಿಸ್ ತಲುಪಿಸಲಾಗಿದೆ.

2736 ಮತದಾರರ ವಿಚಾರಣೆ ನಡೆಸಲಾಗಿದ್ದು 4,744 ವಿಚಾರಣೆ ಬಾಕಿ ಇದೆ ಎಂದು ಮಾಹಿತಿ ನೀಡಿದರು. ಸೆ.1ರಿಂದ 7ರವರೆಗೆ ಕರಡು ಮತದಾರರ ಪಟ್ಟಿಗೆ ಸಂಬಂಧಿಸಿದಂತೆ 1,644 ಹಕ್ಕು ಆಕ್ಷೇಪಣೆಗಳು ಸಲ್ಲಿಕೆಯಾಗಿವೆ.

### ಹಬ್ಬದ ರಜೆ: ಉದ್ದ ವಾಹನಗಳ ಸಾಲು

• ಉದಯವಾಹಿನಿ, ರಾಮನಗರ

ಈ ಬಾರಿ ವಾರಂತ್ಯಕ್ಕೆ ಹೊಂದಿಕೊಂಡಂತೆ ಗೌರಿ-ಗಣೇಶ ಹಬ್ಬ ಬಂದಿರುವುದರಿಂದ ಮೈಸೂರಿನಿಂದ ಬೆಂಗಳೂರು ಕಡೆಗೆ ಹೋಗುವವರ ಸಂಖ್ಯೆ ಹೆಚ್ಚಾಗಿದ್ದು, ಬೆಂಗಳೂರು-ಮೈಸೂರು ರಾಷ್ಟ್ರೀಯ ಹೆದ್ದಾರಿಯ ಟೋಲ್‌ಗಳಲ್ಲಿ ಬೆಳಿಗ್ಗೆಯಿಂದಲೇ ಹೆಚ್ಚಿನ ವಾಹನಗಳ ದಟ್ಟಣೆ ಕಂಡುಬಂತು. ಬೆಂಗಳೂರು ದಕ್ಷಿಣ ತಾಲ್ಲೂಕಿನ ಕಣಿಮಿಣಿಕೆ ಟೋಲ್ ಹಾಗೂ ರಾಮನಗರ ತಾಲ್ಲೂಕಿನ ಶೇಷಗಿರಿಹಳ್ಳಿ ಟೋಲ್‌ಗಳಲ್ಲಿ ಬೆಳಿಗ್ಗೆ ಮೈಸೂರು ಕಡೆಗೆ ಹೋಗುವ ವಾಹನಗಳು ಟೋಲ್ ದಾಟಲು ಕಿಲೋಮೀಟರ್‌ನಷ್ಟು ದೂರ ಸಾಲುಗಟ್ಟಿ ನಿಂತಿದ್ದ ದೃಶ್ಯ ಕಂಡುಬಂತು.

ಎರಡೂ ಟೋಲ್‌ಗಳಲ್ಲಿ ಫಾಸ್ಟ್ಯಾಗ್ ವ್ಯವಸ್ಥೆ ಜೊತೆಗೆ ಏಳೆಂಟು ಟೋಲ್ ಗೇಟ್‌ಗಳಿದ್ದರೂ, ಮೈಸೂರು ಕಡೆಗೆ ಹೋಗುವ ವಾಹನಗಳು ಅತಿ ಹೆಚ್ಚಾಗಿ ಇದ್ದಿದ್ದರಿಂದ ವಾಹನಗಳು ಟೋಲ್ ದಾಟುವುದು ವಿಳಂಬವಾಯಿತು. ಇದರಿಂದಾಗಿ ಬೆಳಿಗ್ಗೆಯೇ ಹೊರಟು ಬೇಗನೆ ಊರು ಸೇರಿಕೊಳ್ಳಬೇಕು ಅಂದುಕೊಂಡಿದ್ದವರು ಟೋಲ್ ಬಳಿ ಕಾಯಬೇಕಾಯಿತು. ವಾರಂತ್ಯಕ್ಕೆ ಹೊಂದಿಕೊಂಡಂತೆ ಹಬ್ಬ-ಹರಿದಿನಗಳು ಬಂದರೆ ಹಾಗೂ ದಸರಾ ಸಂದರ್ಭದಲ್ಲಿ ಬೆಂಗಳೂರು-ಮೈಸೂರು ಹೆದ್ದಾರಿ ಟೋಲ್‌ನಲ್ಲಿ ಯಾವಾಗಲೂ ದಟ್ಟಣೆ ಇದ್ದೇ ಇರುತ್ತದೆ. ನಾವು ಎಷ್ಟೇ ಬೇಗ ಹೋಗಬೇಕು ಅಂದುಕೊಂಡರೂ ಟೋಲ್ ಬಳಿ ಸಿಲುಕಿಕೊಳ್ಳುತ್ತೇವೆ' ಎಂದು ಮೈಸೂರು ಕಡೆಗೆ ಕಾರಿನಲ್ಲಿ ಹೊರಟಿದ್ದ ಪ್ರಯಾಣಿಕ ಅವಿನಾಶ್ ಹೇಳಿದರು. ಯಾವುದೇ ಟೋಲ್ ತಲೆ ಬಿಸಿ ಇಲ್ಲದೆ ಸರ್ವೀಸ್ ರಸ್ತೆಯಲ್ಲಿ ಹೋಗೋಣವೆಂದರೆ ಹೆದ್ದಾರಿಗೆ ಹೊಂದಿಕೊಂಡಂತೆ ಸಂಪೂರ್ಣವಾಗಿ ಸರ್ವೀಸ್ ರಸ್ತೆ ನಿರ್ಮಿಸಿಲ್ಲ. ಹಲವೆಡೆ ಹೆದ್ದಾರಿ ಪಕ್ಕದ ಪಟ್ಟಣ ಅಥವಾ ನಗರಗಳನ್ನು ಬಳಸಿಕೊಂಡು ಹೋಗಬೇಕು.

